MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER – VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 32 | ಮಂಗಳವಾರ : 18–11–2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2–00

VOLUME: 05 | ISSUE: 32 | TUESDAY : 18–11–2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಬಾಂಗ್ಲಾ ಮಾಜಿ ಪ್ರಧಾನಿ ಶೇಖ್ ಹಸೀನಾಗೆ ಗಲ್ಲು ಶಿಕ್ಷೆ



**ಢಾಕಾ, ನ.17–**ಮಾನವ ಹಕ್ಕು ಉಲ್ಲಂಘನೆ ಪ್ರಕರಣದಲ್ಲಿ ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಅವರಿಗೆ ಬಾಂಗ್ಲಾದೇಶದ ಅಂತರರಾಷ್ಟ್ರೀಯ ಅಪರಾಧ ನ್ಯಾಯಮಂಡಳಿ ಇಂದು ಗಲ್ಲು ಶಿಕ್ಷೆ ವಿಧಿಸಿದೆ.

ಹಸೀನಾ ಅವರ ಆಪ್ತರಾಗಿದ್ದ ಮಾಜಿ ಗೃಹ ಸಚಿವ ಅಸಾದುಜ್ಜಮಾನ್ ಖಾನ್ ಕಮಲ್ ಮತ್ತು ಮಾಜಿ ಪೊಲೀಸ್ ಇನ್ಸ್‌ಪೆಕ್ಟರ್ ಜನರಲ್ ಚೌಧರಿ ಅಬ್ದುಲ್ಲಾ ಅಲ್–ಮಾಮುನ್ ಅವರನ್ನೂ ಪ್ರಕರಣದಲ್ಲಿ ಕೋರ್ಟ್ ದೋಷಿ ಎಂದು ಹೇಳಿದೆ. ತ್ರಿಸದಸ್ಯ ನ್ಯಾಯಪೀಠವು ಶೇಖ್ ಹಸೀನಾ ಅವರ ಮೇಲಿರುವ ಆರೋಪ ಸಾಬೀತಾಗಿದೆ ಎಂದು ಹೇಳಿ ಗಲ್ಲು ಶಿಕ್ಷೆ ವಿಧಿಸಿ ಮಹತ್ವದ ತೀರ್ಪು ಪ್ರಕಟಿಸಿದೆ. ಶೇಖ್ ಹಸೀನಾ ಮಾನವ ಹಕ್ಕುಗಳ ಅಪರಾಧ ಎಸಗಿದ್ದಾರೆ. 2024ರ ಆಗಸ್ಟ್ 5 ರಂದು ಚಂಖರ್‌ಪುಲ್‌ನಲ್ಲಿ ಆರು ಪ್ರತಿಭಟನಾಕಾರರನ್ನು ಮಾರಕ ಆಯುಧಗಳನ್ನು ಬಳಸಿ ಕೊಲ್ಲಲಾಯಿತು. ಈ ಆದೇಶಗಳನ್ನು ಹೊರಡಿಸುವ ಮೂಲಕ ಶೇಖ್ ಹಸೀನಾ ಮೂಲಕ ವಿದ್ಯಾರ್ಥಿಗಳನ್ನು ಹತ್ಯೆ ಮಾಡಿದ್ದಾರೆ. ಇಂತಹ ಕೃತ್ಯಗಳನ್ನು ಎಸಗುವ ಮೂಲಕ ಮಾನವೀಯತೆಯ ವಿರುದ್ಧ ಅಪರಾಧಗಳನ್ನು ಮಾಡಿದ್ದಾರೆ ಎಂದು ಕೋರ್ಟ್ ತೀರ್ಪಿನಲ್ಲಿ ಉಲ್ಲೇಖಿಸಿದೆ.

ಹಸೀನಾ ವಿರುದ್ಧದ ಪ್ರಕರಣಗಳನ್ನು ಪಿತೂರಿ ಎಂದು ಅವಾಮಿ ಲೀಗ್ ಪಕ್ಷ ಕರೆದಿದೆ. ಹಸೀನಾ ಮತ್ತು ಖಾನ್ ವಿಚಾರಣೆಗೆ ಹಾಜರಾಗದ ಕಾರಣ 54 ಸಾಕ್ಷ್ಯಗಳನ್ನು ಪರಿಶೀಲಿಸಿ, ಆರೋಪಿಗಳ ಅನುಪಸ್ಥಿತಿಯಲ್ಲೇ ಅಕ್ಟೋಬರ್ 23ರಂದು ವಿಚಾರಣೆ ಪೂರ್ಣಗೊಳಿಸಲಾಗಿತ್ತು. ಆರೋಪಿಗಳಿಗೆ ಮರಣ ದಂಡನೆಯನ್ನೇ ವಿಧಿಸಬೇಕು ಎಂದು ನ್ಯಾಯ ಮಂಡಳಿಯ ವಕೀಲರು ವಾದ ಮಂಡಿಸಿದ್ದರು.

## 42 ಯಾತ್ರಿಕರ ಸಜೀವದಹನ : ಮೃತರೆಲ್ಲರು ಭಾರತೀಯರು

**ದುಬೈ,ನ.17–** ಸೌದಿ ಅರೇಬಿಯಾದ ಮದೀನಾದ ಮುಫ್ರಿಹಾತ್ ಬಳಿ ಬಸ್ ಮತ್ತು ತೈಲ ತುಂಬಿದ್ದ ಟ್ಯಾಂಕರ್ ಡಿಕ್ಕಿಯಲ್ಲಿ 42 ಭಾರತೀಯರು ಸ್ಥಳದ 'ಲ್ಲಿಯೇ ಸುಟ್ಟು ಕರಕಲಾಗಿರುವ ಘಟನೆ ನಡೆದಿದೆ. ಭಾರತೀಯ ಕಾಲಮಾನ ಬೆಳಗಿನ ಜಾವ ಈ ಅಪಘಾತ ಸಂಭವಿಸಿದೆ. ದೇವರ ದರ್ಶನ ಮುಗಿಸಿ ಸುಖನಿದ್ರೆಯಲ್ಲಿದ್ದವರು ಚಿರನಿದ್ರೆಗೆ ಜಾರಿದ್ದಾರೆ.

ಬಸ್ ಮೆಕ್ಕಾದಿಂದ ಮದೀನಾಗೆ ತೆರಳುತ್ತಿತ್ತು ಎಂದು ವರದಿಯಾಗಿದ್ದು ಈ ಬಸ್‌ನಲ್ಲಿದ್ದ ಹೆಚ್ಚಿನ ಪ್ರಯಾಣಿಕರು ತೆಲಂಗಾಣದ ಹೈದರಾಬಾದ್ ನವರಾಗಿದ್ದಾರೆ. ಮೃತಪಟ್ಟವರಲ್ಲಿ ಕನಿಷ್ಠ 11 ಮಹಿಳೆಯರು ಮತ್ತು 10 ಮಕ್ಕಳು ಇದ್ದಾರೆ ಎಂದು ವರದಿ ಹೇಳಿದೆ. ಬಸ್ ಸಂಪೂರ್ಣವಾಗಿ ಸುಟ್ಟು ಕರಕಲಾಗಿದ್ದು, ಸತ್ತವರನ್ನು ಗುರುತಿಸುವುದು ಅತ್ಯಂತ ಸವಾಲಿನ ಕೆಲಸವಾಗಿದೆ ಎಂದು ರಕ್ಷಣಾ ತಂಡ ಗಳು ತಿಳಿಸಿವೆ.


ಉಮ್ರಾ ಯಾತ್ರಿಕರನ್ನು ಕರೆದೊಯ್ಯುತ್ತಿದ್ದ ಬಸ್ ಮದೀನಾ ಬಳಿ ಡೀಸೆಲ್ ಟ್ಯಾಂಕರ್‌ಗೆ ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ 42 ಜನರು ಸಾವನ್ನಪ್ಪಿದ್ದಾರೆ ಎಂದು ಶಂಕಿಸಲಾಗಿದೆ. ಸಾವನ್ನಪ್ಪಿದವರಲ್ಲಿ ಹಲವರು ಭಾರತೀಯ ಪ್ರಜೆಗಳು ಎಂದು ಹೇಳಲಾ



ಗಿದೆ.ಭಾರತೀಯ ಕಾಲಮಾನ ಬೆಳಗಿನ ಜಾವ 1.30 ರ ಸುಮಾರಿಗೆ ಅಪಘಾತ ಸಂಭವಿಸಿದಾಗ ಬಸ್ ಮೆಕ್ಕಾದಿಂದ ಮದೀನಾಗೆ ತೆರಳುತ್ತಿತ್ತು ಈ ಗುಂಪು ತಮ್ಮ ಧಾರ್ಮಿಕ ವಿಧಿಗಳನ್ನು ಮುಗಿಸಿ ಮೆಕ್ಕಾದಿಂದ ಮದೀನಾಕ್ಕೆ ತೆರಳುತ್ತಿದ್ದ ವೇಳೆ ಈ ಘೋರ ದುರಂತ ಸಂಭವಿಸಿದೆ. ಬೆಳಗಿನ ಜಾವವಾದ ಹಿನ್ನೆಲೆಯಲ್ಲಿ ಬಹುತೇಕ ಉಮ್ರಾ ಯಾತ್ರಿಕರು ನಿದ್ರಿಸುತ್ತಿದ್ದರು. ಡಿಕ್ಕಿಯ ನಂತರ ಬಸ್ ಬೆಂಕಿ ಹೊತ್ತಿಕೊಂಡಾಗ ಅವರು ತಪ್ಪಿಸಿಕೊಳ್ಳಲು ಸಾಧ್ಯವಾಗದೆ ಸಜೀವ ದಹನಗೊಂಡಿದ್ದಾರೆ. ಹೀಗಾಗಿ ಡಿಕ್ಕಿಯ ರಭಸಕ್ಕೆ ಎರಡು ವಾಹನಗಳು ಹೊತ್ತಿ ಉರಿದಿದೆ.ಈ ನಡುವೆ ಕೇಂದ್ರ ವಿದೇ ಶಾಂಗ ವ್ಯವಹಾರಗಳ ಸಚಿವ ಡಾ. ಎಸ್ ಜೈಶಂಕರ್, ಭಾರತೀಯ ರಾಯಭಾರ ಕಚೇರಿ ಮತ್ತು ಅಲ್ಲಿನ ವಿದೇಶಾಂಗ ಸಚಿವಾಲಯದ ಅಧಿಕಾರಿಗಳ ಜೊತೆ ಸಂಪರ್ಕ ದಲ್ಲಿದ್ದು, ಮಾಹಿತಿ ಪಡೆದು ಕೊಂಡಿದ್ದಾರೆ.

**ತೆಲಂಗಾಣ ಸರ್ಕಾರದಿಂದ ಸಂಪರ್ಕ:** ಉಮ್ರಾ ಯಾತ್ರಿಕರು ಮೃತಪಟ್ಟ ಮಾಹಿತಿ ತಿಳಿಯು ತ್ತಿದ್ದಂತೆ ತೆಲಂಗಾಣದ ಮುಖ್ಯ ಮಂತ್ರಿ ರೇವಂತ್ ರೆಡ್ಡಿ ಅವರು ರಿಯಾದ್ ನಲ್ಲಿರುವ ಭಾರತೀಯ ರಾಯಭಾರ ಕಚೇರಿಯೊಂದಿಗೆ ಸಂಪರ್ಕದಲ್ಲಿದ್ದಾರೆ. ನವದೆಹಲಿಯ ಅಧಿಕಾರಿಗಳನ್ನು ರಾಯ ಭಾರ ಕಚೇರಿ ಅಧಿಕಾರಿಗಳೊಂದಿಗೆ ನಿಕ 'ಟವಾಗಿ ಸಮನ್ವಯಗೊಳಿಸಲು ಸೂಚಿ ಸಿದ್ದಾರೆ. ಬಸ್ ಮತ್ತು ತೈಲ ತುಂಬಿದ್ದ ಟ್ಯಾಂಕರ್ ಅಪಘಾತದಲ್ಲಿ ತೆಲಂಗಾಣಕ್ಕೆ ಸೇರಿದ ಎಷ್ಟು ಮಂದಿ ಮೃತಪಟ್ಟಿದ್ದಾರೆ ಎನ್ನುವ ಕುರಿತು ಮಾಹಿತಿ ಸಂಗ್ರಹಿಸಲು ಸರ್ಕಾರವು ನಿವಾ ಸ ಆಯುಕ್ತರಿಗೆ ಸೂಚನೆ ನೀಡಿದೆ ಜೊತೆಗೆ ರಾಜ್ಯ ಸಚಿವಾಲಯದಲ್ಲಿ ನಿಯಂತ್ರಣ ಕೊಠಡಿ ಸ್ಥಾಪಿಸಲಾಗಿದೆ.


ಸಂತ್ರಸ್ತರ ಕುಟುಂಬಕ್ಕೆ ಸಹಾಯ ಮಾಡಲು ಸರ್ಕಾರ ನಿಯಂತ್ರಣ ಕೊಠಡಿ ಸಂಖ್ಯೆಗಳನ್ನು ಸಹ ನೀಡಿದೆ +91 79979 59754 ಮತ್ತು +91 9912919545 ಸಂಪರ್ಕ ಮಾಡಬಹುದು ಎಂದು ಹೇಳಿದೆ



**ಬಸ್‌ನಲ್ಲಿದ್ದ 42 ಮಂದಿ ಸಾವು:** ಬಸ್ ಬೆಂಕಿ ಹೊತ್ತಿಕೊಂಡಾಗ ಅದರಲ್ಲಿ 42 ಉಮ್ರಾ ಯಾತ್ರಿಕ ರಿದ್ದರು ಎಂದು ಹೈದರಾಬಾದ್ ಸಂಸದ ಅಸದುದ್ದೀನ್ ಓವೈಸಿ ಅವರು ಹೇಳಿದ್ದಾರೆರಿಯಾದ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯ ಉಪ ಮುಖ್ಯಸ್ಥ ಅಬು ಮಾಥೇನ್ ಜಾರ್ಜ್ ಅವರೊಂದಿಗೆ ಸಂಪರ್ಕದಲ್ಲಿದ್ದು, ಅಪಘಾತದ ಬಗ್ಗೆ ಮಾಹಿತಿ ಸಂಗ್ರಹಿಸಲಾಗುತ್ತಿದೆ ಎಂದು ಹೇಳಿದ್ದಾರೆ

ಹೈದರಾಬಾದ್ ಮೂಲದ ಎರಡು ಏಜೆನ್ಸಿಗಳಾದ ಅಲ್–ಮೀನಾ ಹಜ್ ಮತ್ತು ಉಮ್ರಾ ಟ್ರಾವೆಲ್ಸ್ ಮೂಲಕ ಪ್ರಯಾಣಿಸಿದ ಸುಮಾರು 16 ಉಮ್ರಾ ಯಾತ್ರಿಕರು ವಿನಾಶಕಾರಿ ಬಸ್ ಬೆಂಕಿಯಲ್ಲಿ ಸಾವನ್ನಪ್ಪಿದವರಲ್ಲಿ ಸೇರಿದ್ದಾರೆ ಎಂದು ವರದಿಗಳು ತಿಳಿಸಿವೆ.

ಕೇಂದ್ರ ಸರ್ಕಾರ ಮೃತದೇಹಗಳನ್ನು ಭಾರತಕ್ಕೆ ತರಬೇಕು ಮತ್ತು ಗಾಯಾಳುಗಳಿಗೆ ಸರಿಯಾದ ವೈದ್ಯಕೀಯ ಚಿಕಿತ್ಸೆ ನೀಡಬೇಕು ಎಂದು ಮನವಿ ಮಾಡಿದ್ದಾರೆ.



**ಪ್ರಧಾನಿ ಸಂತಾಪ:** ಮೆಕ್ಕಾದಿಂದ ಮದೀನಾಗೆ ಪ್ರಯಾಣಿಸುತ್ತಿದ್ದ ಬಸ್‌ಗೆ ಡೀಸೆಲ್ ಟ್ಯಾಂಕರ್ ಡಿಕ್ಕಿಯಾಗಿ 42 ಮಂದಿ ಭಾರತೀಯರು ಮೃತಪಟ್ಟಿರುವುದಕ್ಕೆ ಪ್ರಧಾನಿ ನರೇಂದ್ರ ಮೋದಿ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಈ ಸುದ್ದಿ ತಿಳಿದು ಅತೀವ ನೋವಾಗಿದೆ. ಈ ಘೋರ ದುರಂತದಲ್ಲಿ ತಮ್ಮ ಪ್ರೀತಿ,ಪಾತ್ರರಿಂದ ಕಳೆದುಕೊಂಡ ಕುಟುಂಬದ ಸದಸ್ಯರಿಗೆ ನೋವು ಸಹಿಸಿಕೊಳ್ಳುವ ಶಕ್ತಿ ನೀಡಲಿ ಎಂದು ಎಕ್ಸ್ ಖಾತೆಯಲ್ಲಿ ದೇವರಲ್ಲಿ ಪ್ರಾರ್ಥಿಸುವುದಾಗಿ ತಿಳಿಸಿದ್ದಾರೆ.

ದುರಂತದಲ್ಲಿ ಗಾಯಗೊಂಡವರು ಶೀಘ್ರ ಗುಣಮುಖರಾಗಲಿ. ರಿಯಾದ್‌ನಲ್ಲಿರುವ ಭಾರತದ ರಾಯಭಾರ ಕಚೇರಿ ಹಾಗೂ ಜೆಡ್ಡಾದ ರಾಯಭಾರಿ ಕಚೇರಿಯೂ ಎಲ್ಲಾ ರೀತಿಯ ಸಹಾಯ ಮಾಡಲಿದೆ. ನಮ್ಮ ಅಧಿಕಾರಿಗಳು ಸೌದಿ ಅರೇಬಿಯಾದ ಅಧಿಕಾರಿ ಜೊತೆ ನಿರಂತರ ಸಂಪರ್ಕದಲ್ಲಿದ್ದಾರೆ ಎಂದು ಹೇಳಿದರು.

## ಎನ್.ಎಮ್. ಬಿರಾದಾರ ರವರಿಂದ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ಕಾರ್ಯಗಾರ

ಯುವ ಮಾರ್ಗ ಸುದ್ದಿ

**ಮಾನ್ವಿ,ನ.17–** ಪಟ್ಟಣದ ಕಲ್ಮಠ ಗುರುಭವ ನದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾಲೂಕು ಘಟಕ ಹಾಗೂ ಮಾಧ್ಯಮ ಸಮಿತಿ, ಖಾಸಗಿ ಕಾಲೇಜುಗಳ ಉಪನ್ಯಾಸಕರ ಸಂಘ ಮಾನ್ವಿ ತಾ. ಘಟಕ, ಕಲ್ಮಠ ಶಿಕ್ಷಣ ಸಮೂಹ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ನಡೆದ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಒಂದುದಿನದ ಉಚಿತ ತರಬೇತಿ ಕಾರ್ಯ ಗಾರವನ್ನು ತಾ.ಪಂ. ಇ.ಓ. ಪುರುರಾಜ್ ಸಿಂಗ್ ಸೋಲಂಕಿ ಐ.ಎ.ಎಸ್. ಉದ್ಘಾಟಿ ಸಿ ಮಾತನಾಡಿ ವಿದ್ಯಾರ್ಥಿಗಳು ಯಾವು ದೇ ಪರೀಕ್ಷೆಗಳು ಕಷ್ಟ ಎಂದು ಭಾವಿಸದೆ ನಿರಂತರವಾದ ಅಧ್ಯಯನ ಹಾಗೂ ಪ್ರತಿದಿ ನದ ವೇಳಪಟ್ಟಿಯ ಪ್ರಕಾರ ಅಧ್ಯಾಯನ ನಡೆಸಿದಲ್ಲಿ ಸುಲಾಭವಾಗಿ ಯಶಸ್ಸನ್ನು ಸಾಧಿಸುವುದಕ್ಕೆ ಸಾಧ್ಯವಿದೆ ವಿದ್ಯಾರ್ಥಿಗಳು




ಪದವಿ ಕಲಿಕೆಯ ಜೊತೆಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಕೂಡ ಸಿದ್ದತೆಗಳನ್ನು ಕೈಗೊಂಡಲ್ಲಿ ಆಢಳಿತಾತ್ಮಕ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಸುಲಾಭವಾಗಿ ಉತ್ತೀರ್ಣರಾಗಿ ಉನ್ನತವಾದ ಹುದ್ದೆಗಳನ್ನು ಪಡೆಯುವುದಕ್ಕೆ ಸಾಧ್ಯವಿದೆ ಎಂದು ತಿಳಿಸಿದರು.

ತಹಸೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದಲ್ಲಿ 371 ಜೆ ಅಡಿಯಲ್ಲಿ ಶಿಕ್ಷಣ ಮತ್ತು ಉದ್ಯೋಗಕ್ಕೆ ಉತ್ತಮವಾದ ಅವಕಾಶವಿದ್ದು ವಿದ್ಯರ್ಥಿಗಳು ಶಿಕ್ಷಣದ ಜೊತೆ ಜೊತೆಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ದತೆ ಮಾಡಿಕೊಂಡಲ್ಲಿ ಸರ್ಕಾ ರದ ವಿವಿಧ ಹೆದ್ದೆಗಳನ್ನು ಪಡೆಯುವುದಕ್ಕೆ ಸಾಕಷ್ಟು(2ನೇಪುಟಕ್ಕೆ)

## ಹಿಂದೂ ಸಂಘಟನೆ ಹಾಗೂ ಹಿಂದೂ ರಾಷ್ಟ್ರದ ಸ್ಥಾಪನೆ ಮಾಡೋಣ : ರಮಾನಂದಗೌಡ

ಯುವ ಮಾರ್ಗ ಸುದ್ದಿ

**ಮಾನ್ವಿ,ನ.17–**ಪಟ್ಟಣದ ಬಾಲಾಜಿ ಕಾಂಪರ್ಟ ಸಭಾಂಗಣ ದಲ್ಲಿ ಹಿಂದೂ ಜನಜಾಗೃತಿ ಸಮಿತಿ ವತಿಯಿಂದ ನಡೆದ ಹಿಂದೂ ಸಂಘಟನೆ ಹಾಗೂ ಹಿಂದೂ ರಾಷ್ಟ್ರದ ಸ್ಥಾಪನೆ ಕಾರ್ಯಕ್ರಮದಲ್ಲಿ ಹಿಂದೂ ಜನಜಾಗೃತಿ ಸಮಿತಿಯ ರಮಾನಂದಗೌಡ ಮಾತನಾಡಿ, ಭಾರತದಲ್ಲಿ ವಿಶ್ವದಲ್ಲಿಯೇ ಶ್ರೇಷ್ಟವಾದ ಗುರುಕುಲ ಪದ್ದತಿ ರೂಡಿಯಲ್ಲಿತ್ತು ಅಲ್ಲಿ ನಮ್ಮ ಗುರುಗಳು ಮಕ್ಕಳಿಗೆ ನಮ್ಮ ಶ್ರೇಷ್ಟವಾದ ಹಿಂದೂ ಧರ್ಮದ ಬಗ್ಗೆ ಹಾಗೂ ಅಚರಣೆಗಳ ಬಗ್ಗೆ ಸಾಂಸ್ಕೃತಿ, ಪರಂಪರೆಗಳ ಬಗ್ಗೆ ಮಾಹಿತಿ ನೀಡುತ್ತಿದ್ದಾರು ಹಾಗೂ ನಮ್ಮಲ್ಲಿನ ಅವಿಭಾಜಿತ ಕುಟುಂಬಗಳ ಹಿರಿಯರಿಂದ ಕುಟುಂಬ ಸದಸ್ಯರಿಗೆ ಧಾರ್ಮಿಕ ಸಂಸ್ಕಾರ ದೊರೆಯು ತ್ತಿತು ಅದ್ದರೆ ಹಿಂದಿನ ಅಧುನಿಕ ಶಿಕ್ಷಣ ಪದ್ದತಿ, ಜೀವನಶೈಲಿಯಿಂದ ನಮ್ಮ ಮಕ್ಕಳಿಗೆ ಹಿಂದೂ ಧರ್ಮದ ಸಮಸ್ಕಾರ ದೊರೆಯದೆ ಅನ್ಯದಾರಿಗೆ ಹೋಗುತ್ತಿದ್ದಾರೆ ಅದ್ದರಿಂದ



ನಮ್ಮ ಜನರಿಗೆ ಹಿಂದೂ ಜನಜಾಗೃತಿ ಸಮಿತಿ ವತಿಯಿಂದ ಹಿಂದೂ ಸಂಘಟನೆ ಹಾಗೂ ಹಿಂದೂ ರಾಷ್ಟ್ರದ ಸ್ಥಾಪನೆ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ ಹಾಗೂ ಪ್ರತಿದಿನ ಧರ್ಮಾಚರಣೆ ಹಾಗೂ ಅಧ್ಯಾತ್ಮಕ ಸಾಧನೆಯಿಂದ ನಮ್ಮ ಜೀವನವನ್ನು ಆನಂದಮಾಯ ವಾಗಿಸಿ ಕೊಳ್ಳಬಹುದು ಎಂದು ತಿಳಿಸಿದರು.ಸತ್ಸಂಗದಲ್ಲಿ ಪಟ್ಟಣದ ನೂರಾರು ಜನರು ಭಾಗವಹಿಸಿದ್ದರು.

## ಅಖಿಲ ಭಾರತ ವೀರಶೈವ ಲಿಂಗಾಯತ ಸೌಹಾರ್ದ ಸಹಕಾರಿಗೆ ಸೌಹಾರ್ದ ಭೇಟಿ ನೀಡಿದ ಶ್ರೀಗಳು

ಯುವ ಮಾರ್ಗ ಸುದ್ದಿ

**ಮಾನ್ವಿ ನ.17–** ಪಟ್ಟಣದಲ್ಲಿ ನೂತನವಾಗಿ ಆರಂಭವಾಗಿರುವ ಅಖಿಲ ಭಾರತ ವೀರ ಶೈವ ಲಿಂಗಾಯತ ಸಹಕಾರಿ ಸಂಘ ನಿಯ ಮಿತ ( ರಿ ) ಇದಕ್ಕೆ ಶ್ರೀರೇಣುಕಾ ಶಾಂತಮಲ್ಲ ಬೃಹ್ನಮಠ ಮಹಾಸ್ವಾಮಿಗಳು ನಿಲೋಗಲ್ ಇವರು ಸೌಹಾರ್ದವಾಗಿ ಭೇಟಿ ನೀಡಿ ಅಧ್ಯಕ್ಷ ಅರುಣಚಂದಾ ಸೇರಿದಂತೆ ಪದಾಧಿಕಾರಿಗಳಿಗೆ ಸಿಬ್ಬಂದಿ ಗಳಿಗೆ ಆಶೀರ್ವಾದ ನೀಡಿ ಮುಂದಿನ ದಿನಗಳಲ್ಲಿ ಈ ನಿಮ್ಮ ಸಹಕಾರಿ ಸಂಘವು ಬೃಹತ್ ಮಟ್ಟದಲ್ಲಿ ಬೆಳೆದು ಲಕ್ಷಾಂತರ ಬಡವರಿಗೆ ಸಹಕಾರಿಯಾಗಲಿ ಎಂದು ಆಶೀರ್ವಾದ ನೀಡಿದರು.

ನಂತರ ಅಧ್ಯಕ್ಷ ಅರುಣಚಂದಾ ಮಾತಾ ನಾಡಿ, ಹಲವಾರು ವರ್ಷಗಳಿಂದ ಒಂದು ಸಹಕಾರಿ ಸಂಘ ಮಾಡುವುದರ ಜೊತೆಗೆ ಬಡವರಿಗೆ ಸಹಕಾರ ಮಾಡುವ ಉದ್ದೇಶ ದಿಂದ ಅಖಿಲ ಭಾರತ ವೀರಶೈವ ಲಿಂಗಾ ಯತ ಸಹಕಾರಿ ಸಂಘದ ಬ್ಯಾಂಕ್ ಆರಂಭಿ



ಸಲಾಗಿದ್ದು ಮುಂದಿನ ದಿನಗಳಲ್ಲಿ ನನ್ನ ಹಾಗೂ ಸಹಕಾರಿಯ ನಿರ್ದೇಶಕರ ಆಶಯದಂತೆ ಸಿಬ್ಬಂದಿಗಳ ಸಹಕಾರದೊಂದಿಗೆ ನಿಮಗೆಲ್ಲರಿಗೂ ಮಾದರಿಯಾಗುವಂತೆ ಮುನ್ನಡೆಸುತ್ತೇನೆ ಅದಕ್ಕೆ ಈಗಾಗಲೇ ನಿಲೋಗಲ್ ಶ್ರೀಗಳ ಆಶೀರ್ವಾದ ಸಿಕ್ಕಿದೆ ಎಂದು ಹೇಳಿ ಶ್ರೀಗಳಿಗೆ ವಿಶೇಷವಾಗಿ ಸನ್ಮಾನಿಸಿ ಗೌರವಿಸಿದರು.

ಅಖಿಲ ಭಾರತ ವೀರಶೈವ ಲಿಂಗಾಯತ ಸೌಹಾರ್ದ ಸಹಕಾರಿ ಸಂಘದ ನಿರ್ದೇಶಕರಾದ ರವಿಕುಮಾರ್ ಪಾಟೀಲ ಗೋರ್ಕಲ್, ಚಂದ್ರಶೇಖರ ಮದ್ಲಾಪೂರು,ತಾಯಣ್ಣ ಕಿನ್ನೇರಿ, ಸೇರಿದಂತೆ ಜಗದೀಶ್ ಓತೂರು,ವಿಶ್ವನಾಥ ಪಾಟೀಲ, ಗುರುಗೌಡ ಕಣ್ಣೂರು, ದೊಡ್ಡಪ್ಪ ಜೀನೂರು, ಶರಣಗೌಡ ಗೋರ್ಕಲ್, ಸಹಕಾರಿಯ ಮ್ಯಾನೇಜರ್ ವಿರೇಶ್ ಸೇರಿದಂತೆ ಸಿಬ್ಬಂದಿಗಳು ಇದ್ದರು.

## ಸಂಪುಟ ಪುನಾರಚನೆ ಸಾಧ್ಯತೆ ತಳ್ಳಿ ಹಾಕಿದ ಡಿ.ಕೆ.ಶಿವಕುಮಾರ್

**ಬೆಂಗಳೂರು, ನ.17–** ಯಾವ ರಾಜಕೀಯ ಚಟುವಟಿಕೆಗಳೂ ಗರಿಗೆದರಿಲ್ಲ ಎಂದು ಹೇಳುವ ಮೂಲಕ ಕೆಪಿಸಿಸಿ ಅಧ್ಯಕ್ಷ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ಸಚಿವ ಸಂಪುಟ ಪುನರ್ ರಚನೆಯ ಸಾಧ್ಯತೆಗಳನ್ನು ತಳ್ಳಿ ಹಾಕಿದ್ದಾರೆ.

ದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಪಕ್ಷದ ರಾಷ್ಟ್ರಾಧ್ಯಕ್ಷರು ಮತ್ತು ರಾಜ್ಯಾಧ್ಯಕ್ಷರು ಭೇಟಿ ಮಾಡುವುದು ಸಹಜ. ಪಕ್ಷದ ನಾನಾ ವಿಚಾರಗಳ ಕುರಿತು ರಾಷ್ಟ್ರಾಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರೊಂದಿಗೆ ಚರ್ಚೆ ಮಾಡಿದ್ದೇನೆ ಎಂದಿದ್ದಾರೆ.

ಶನಿವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ದೆಹಲಿಗೆ ಭೇಟಿ ನೀಡಿದ ವೇಳೆ ಲೋಕಸಭೆಯ

ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ಅವರನ್ನು ಭೇಟಿ ಮಾಡಿದರು. ಆ ಸಂದರ್ಭದಲ್ಲಿ ನಡೆದ ಚರ್ಚೆಯಲ್ಲಿ ಸಚಿವ ಸಂಪುಟ ಪುನರ್‌ರಚನೆ ಮಾಡುವಂತೆ ರಾಹುಲ್‌ಗಾಂಧಿ ಅನುಮತಿಸಿದ್ದರು ಎಂದು ಹೇಳಲಾಗಿದೆ.

ಆದರೆ ಯಾವಾಗ ಸಂಪುಟ ಪುನರ್‌ರಚನೆಯಾಗಲಿದೆ ಎಂಬ ಬಗ್ಗೆ ಸ್ಪಷ್ಟತೆ ಇರಲಿಲ್ಲ. ಹೈಕಮಾಂಡ್ ಸಂಪುಟ ಪುನರ್‌ರಚನೆಗೆ ಅವಕಾಶ ನೀಡಿದ್ದೆ ಆದರೆ, ನಾಯಕತ್ವ ಬದಲಾವಣೆಯ ಚರ್ಚೆಗಳಾಗುವುದಿಲ್ಲ. ಒಂದು ವೇಳೆ ಸಂಪುಟ ಪುನರ್‌ರಚನೆಯಾಗದೇ ಇದ್ದರೆ, ನಾಯಕತ್ವದ ಬದಲಾವಣೆ ಒತ್ತಡಗಳು ಹೆಚ್ಚಾಗುತ್ತವೆ ಎಂಬ ಮಾಹಿತಿ ಇದೆ.

ರಾಹುಲ್‌ಗಾಂಧಿ ಅವರ ಭೇಟಿಯಲ್ಲಿ ಸಿದ್ದರಾಮಯ್ಯ ಅವರಿಗೆ ಸಂಪುಟ



ಪುನರ್‌ರಚನೆಗೆ ಅನುಮತಿ ಸಿಕ್ಕಿದೆ. ಆದರೆ ಅದರ ಬೆನ್ನಲ್ಲೆ ಡಿ.ಕೆ.ಶಿವಕು 'ಮಾರ್ ಅವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ, ಸಂಪುಟ ಪುನರ್‌ರಚನೆಗೆ ಅನುಮತಿ ನೀಡದಂತೆ ಒತ್ತಡ ಹಾಕಿದ್ದಾರೆ.

ನಿನ್ನೆ ಸಂಜೆ ಖರ್ಗೆ ಅವರನ್ನು ಭೇಟಿ ಮಾಡಿದ ಡಿ.ಕೆ.ಶಿವಕುಮಾರ್ ಬೆಳಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿದ್ದಾರೆ. ಸಂಪುಟ ಪುನರ್‌ರಚನೆ ಮುಖ್ಯಮಂತ್ರಿ ಅವರ ಜವಾಬ್ದಾರಿ. ಹೈಕಮಾಂಡ್ ಒಪ್ಪಿಗೆ ನೀಡಿದರೆ, ಅವರು ಕ್ರಮಕೈಗೊಳ್ಳುತ್ತಾರೆ ಎಂದು ಹೇಳಿದ್ದಾರೆ.

ಸದ್ಯಕ್ಕಂತೂ ಯಾವುದೇ ರಾಜಕೀಯ ಚಟುವಟಿಕೆಗಳು ಗರಿಗೆದರಿಲ್ಲ. ಪಕ್ಷ ಇದ್ದರೆ ನಾವು. ಇಲ್ಲವಾದರೆ ಯಾವುದೂ ಇಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಹೈಕಮಾಂಡ್ ಮತ್ತು ತಮ ನಡುವೆ ನಾಯಕತ್ವ ಬದ ಲಾವಣೆ ಬಗ್ಗೆ ಯಾವ ಚರ್ಚೆಗಳೂ ನಡೆದಿಲ್ಲ ಎಂದು(2ನೇಪುಟಕ್ಕೆ)

## ಮೊದಲನೇಯ ಪುಟದಿಂದ

## ಎನ್.ಎಮ್. ಬಿರಾದಾರ ರವರಿಂದ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ಕಾರ್ಯಗಾರ

ಅವಕಾಶಗಳಿವೆ ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಇಂತಹ ತರಬೇತಿಗಳನ್ನು ಸದುಪಯೋಗ ಪಡಿಸಿಕೊಳ್ಳುವಂತೆ ಕೋರಿದರು.

ವಿಶೇಷ ಸಂಪನ್ಮೂಲ ವ್ಯಕ್ತಿಗಳಾದ ವಿಜಯಪುರ ಚಾಣಕ್ಯ ಕರಿಯರ್ ಅಕಾಡೆಮಿ ಸಂಸ್ಥಾಪಕರಾದ ಎನ್.ಎಮ್. ಬಿರಾದಾರ ರವರು ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಯಾವರೀತಿ ಸಿದ್ದತೆ ಮಾಡಿಕೊಳ್ಳಬೇಕು ಹಾಗೂ ಅವುಗಳ ನಿಯಮಗಳ ಬಗ್ಗೆ ,ಅಧ್ಯಾಯನ ಮಾಡುವ ಪದ್ದತಿಗಳ ಬಗ್ಗೆ ವಿಸ್ತುತವಾಗಿ ತಿಳಿಸಿಕೊಟ್ಟರು

ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ನಿಲಗಲ್ ಶ್ರೀ ರೇಣುಕಾ ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಿದರು ತಾ.ಪಂ.ಸಹಾಯಕ ನಿರ್ದೇಶಕರಾದ ಖಾಲೀದ್ ಅಹ್ಮದ್, ಕಲ್ಮಠ ಶಿಕ್ಷಣ ಸಂಸ್ಥೆಗಳ ಆಡಳಿತಾಧಿಕಾರಿ ಸಂಗಯ್ಯಸ್ವಾಮಿ, ಕಿಡಿಗಣಯ್ಯಸ್ವಾಮಿ, ಅ.ಖಿ.ಭಾ,ವೀ,ಲಿಂ,ಮಹಾಸಭಾ ಮಾನ್ವಿ ತಾ.ಘಟಕದ ಅಧ್ಯಕ್ಷರಾದ ಅರುಣ್ ಚಾಂದಾ , ಮಾಧ್ಯಮ ಸಮಿತಿಯ ತಾ.ಅಧ್ಯಕ್ಷರಾದ ರಾಜಶೇಖರ್,ಸಿದ್ರಾಮಯ್ಯಸ್ವಾಮಿ,ಸುರೇಶ ಹಿರಾ, ಖಾಸಗಿ ಕಾಲೇಜುಗಳ ಉಪನ್ಯಾಸಕರ ಸಂಘ ತಾ. ಘಟಕದ ಅಧ್ಯಕ್ಷರಾದ ಆಂಜನೇಯ್ಯ ನಸಲಾಪುರ, ಕ,ಸಾ,ಪ, ಜಿಲ್ಲಾ ಗೌ,ಕಾರ್ಯದರ್ಶಿ ತಾಯಪ್ಪ ಬಿ.ಹೋಸೂರು, ನೇತಾಜಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಕೆ.ಈ. ನರಸಿಂಹ, ಸೇರಿದಂತೆ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ,ಉಪನ್ಯಾಸಕರು ಭಾಗವಹಿಸಿದರು.

## ಸಂಪುಟ ಪುನಾರಚನೆ ಸಾಧ್ಯತೆ ತಳ್ಳಿ ಹಾಕಿದ ಡಿ.ಕೆ.ಶಿವಕುಮಾರ್

ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ. ಮುಖ್ಯಮಂತ್ರಿ ಸ್ಥಾನ ಬೇಕೇ ಬೇಕೆಂದು ಡಿ.ಕೆ.ಶಿವಕುಮಾರ್ ಪಟ್ಟು ಹಿಡಿದಿದ್ದು, ಇದಕ್ಕಾಗಿ ದೆಹಲಿಯಲ್ಲಿ ಭಾರೀ ಲಾಬಿ ನಡೆಸುತ್ತಿದ್ದಾರೆ. ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿ ಹೈಕಮಾಂಡ್ ಅನ್ನು ಬ್ಲಾಕ್‌ಮೇಲ್ ಮಾಡುತ್ತಿದ್ದಾರೆ ಎಂದು ಹೇಳಲಾಗಿತ್ತು. ಆದರೆ ಅಂತಹ ಎಲ್ಲಾ ವದಂತಿಗಳನ್ನು ಡಿ.ಕೆ.ಶಿವಕುಮಾರ್ ಸಾರಾಸಗಟಾಗಿ ತಳ್ಳಿ ಹಾಕಿದ್ದಾರೆ.

ನಿನ್ನೆ ಸಂಜೆ ಸುದ್ದಿಗಾರರೊಂದಿಗೆ ಮಾತನಾಡುವಾಗ ಅವರು, ನಾನು ಮಾನಸಿಕವಾಗಿ, ಭೌತಿಕವಾಗಿ, ರಾಜಕೀಯವಾಗಿ, ಆರೋಗ್ಯವಾಗಿದ್ದೇನೆ. ಪಕ್ಷ ಎಲ್ಲಿವರೆಗೂ ಅವಕಾಶ ನೀಡುತ್ತದೆಯೋ ಅಲ್ಲಿವರೆಗೂ ವಹಿಸಿದ್ದ ಜವಾಬ್ದಾರಿಗಳನ್ನು ನಿಭಾಹಿಸುತ್ತೆ?ನೆ ಎಂದು ಹೇಳುವ ಮೂಲಕ ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಲು ನನಗೆ ತಲೆ ಕೆಟ್ಟಿಲ್ಲ ಎಂಬರ್ಥದಲ್ಲಿ ಅಸಮಾಧಾನ ವ್ಯಕ್ತಪಡಿಸಿದರು.

ಗಾಂಧಿ ಭಾರತ ಆಂದೋಲನದ ಅಂಗವಾಗಿ ರಾಜ್ಯದಲ್ಲಿ 100 ಕಾಂಗ್ರೆಸ್? ಕಚೇರಿಗಳನ್ನು ನಿರ್ಮಿಸುವ ಗುರಿ ತಮದ್ದಾಗಿದೆ. ಡಿಸೆಂಬರ್ 1 ರಿಂದ ಸಂಸತ್‌ನ ಚಳಿಗಾಲದ ಅಧಿವೇಶನ ನಡೆಯುತ್ತದೆ. ಅದಕ್ಕೂ ಮುನ್ನ ಶನಿವಾರ ಅಥವಾ ಭಾನುವಾರ ಬೆಂಗಳೂರಿಗೆ ಬಂದು ಕಾಂಗ್ರೆಸ್? ಕಚೇರಿಯ ನಿರ್ಮಾಣ ಕಾಮಗಾರಿಗಳಿಗೆ ಶಂಕು ಸ್ಥಾಪನೆ ನೆರವೇರಿಸಿಕೊಡುವಂತೆ ಮಲ್ಲಿಕಾರ್ಜುನ ಖರ್ಗೆಅವರಿಗೆ ಮನವಿ ಮಾಡಿದ್ದೇನೆ. ರಾಹುಲ್‌ಗಾಂಧಿ ಅವರೇ ಬಂದು ಶಂಕು ಸ್ಥಾಪನೆ ನೆರವೇರಿಸಬೇಕು ಎಂದು ತಮ ಅಭಿಲಾಷೆ ಎಂದು ಹೇಳಿದರು.

ಆಕಾಂಕ್ಷಿಗಳಿಗೆ ತಣ್ಣಿರು:ಸಚಿವ ಸಂಪುಟ ಪುನರ್‌ರಚನೆಯಾಗಲಿದೆ ಎಂಬ ಸುಳಿವು ದೊರೆಯುತ್ತಿದ್ದಂತೆ ಆಕಾಂಕ್ಷಿಗಳ ದಂಡು ದೆಹಲಿಯತ್ತ ಮುಖ ಮಾಡಿತು. ಆದರೆ ಡಿ.ಕೆ.ಶಿವಕುಮಾರ್ ಅವರ ಹೇಳಿಕೆ ಉತ್ಸಾಹಿಗಳಿಗೆ ತಣ್ಣಿ?ರು ಎರಚಿದಂತಾಗಿದೆ.

ಸಿದ್ದರಾಮಯ್ಯ ಅವರು ಪ್ರಧಾನಿ ನರೇಂದ್ರ ಮೋದಿ ಅವರ ಭೇಟಿಗಾಗಿ ಇಂದು ದೆಹಲಿಗೆ ಭೇಟಿ ನೀಡಿದ್ದಾರೆ. ಮಧ್ಯಾಹ್ನ ಪ್ರಧಾನಿ ಭೇಟಿ ಬಳಿಕ ಸಂಜೆ ಹೈಕಮಾಂಡ್ ನಾಯಕರ ಜೊತೆ ಮಾತುಕತೆ ನಡೆಸಬಹುದು ಎಂಬ ಮಾಹಿತಿಯಿದೆ.

ಸಂಪುಟ ಪುನರ್‌ರಚನೆಯ ಚರ್ಚೆಗಾಗಿ ಸಿದ್ದರಾಮಯ್ಯ ದೆಹಲಿಯಲ್ಲಿ ಉಳಿಯಲಿದ್ದಾರೆ ಎಂದು ಹೇಳಲಾಗಿದ್ದು, ಆದರೆ ಇಂದು ರಾತ್ರಿಯೇ ಸಿದ್ದರಾಮಯ್ಯ ವಾಪಸ್ಸಾಗುತ್ತಿದ್ದಾರೆ. ಈ ಬೆಳವಣಿಗೆಗಳನ್ನು ನೋಡಿದರೆ, ಸಂಪುಟ ಪುನರ್ ರಚನೆಯಾಗುವುದಿಲ್ಲ ಎಂಬ ಅರ್ಥದಲ್ಲಿ ಡಿ.ಕೆ. ಶಿವಕುಮಾರ್ ಹೇಳಿಕೆ ನಿಜ ಎನಿಸುತ್ತಿದೆ.

## ರೈತರ ಹೋರಾಟಕ್ಕೆ ಸದಾಕಾಲ ಬೆಂಬಲ: ಭಗವಂತ ಖೂಬಾ



**ಬೀದರ್:ನ.17**–ಕಬ್ಬಿನ ಬೆಂಬಲ ಬೆಲೆ ಹೆಚ್ಚಳಕ್ಕಾಗಿ ಬೀದರ ನಗರದಲ್ಲಿ ನಡೆಯುತ್ತಿರುವ ಅಹೋರಾತ್ರಿ ಧರಣಿಯಲ್ಲಿ ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ಅವರು ಪಾಲ್ಗೊಂಡು ರೈತರಿಗೆ ಸಂಪೂರ್ಣ ಬೆಂಬಲ ವ್ಯಕ್ತಪಡಿಸಿದರು.

ರೈತರ ಹೋರಾಟ ನ್ಯಾಯಸಮ್ಮತ ಮತ್ತು ಭಾವನಾತ್ಮಕ ಬೇಡಿಕೆಯಾಗಿದೆ ಎಂದು ಅವರು ಅಭಿಪ್ರಾಯಪಟ್ಟರು. "ರಾಜ್ಯ ಸರ್ಕಾರ ಪ್ರತಿ ಟನ್ ಕಬ್ಬಿಗೆ ರೂ.3300 ನಿಗದಿ ಮಾಡಿದೆ. ಆದರೆ ನಮ್ಮ ಜಿಲ್ಲೆಯ ರೈತರು ತಮ್ಮ ಹೃದಯ ವೈಶಾಲ್ಯತೆ ತೋರಿಸಿ ರೂ.3100ಕ್ಕೆ ಮಾತ್ರ ಬೇಡಿಕೆ ಇಟ್ಟಿದ್ದಾರೆ. ಈ ಬೇಡಿಕೆಗೆ ಸ್ಪಂದಿಸದಿರುವ ಜಿಲ್ಲಾ ಉಸ್ತುವಾರಿ ಮಂತ್ರಿಗಳು, ಜಿಲ್ಲಾಡಳಿತ ಮತ್ತು ಸಕ್ಕರೆ ಕಾರ್ಖಾನೆಗಳಿಗೆ ಇದು ಒಳ್ಳೆಯದಾಗುವುದಿಲ್ಲ. ರೈತರ ಕಳಕಳಿ ಶಾಪ ತಟ್ಟುತ್ತದೆ," ಎಂದು ಖೂಬಾ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯದ ಅನೇಕ ಜಿಲ್ಲೆಗಳಲ್ಲಿ ನಡೆಯುತ್ತಿರುವ ಹೋರಾಟಗಳಿಗೆ ಅಲ್ಲಿನ ಸಚಿವರು ಭೇಟಿ ನೀಡಿದರೂ, ಬೀದರ ಜಿಲ್ಲೆಯ ಇಬ್ಬರು ಸಚಿವರು ರೈತರತ್ತ ಗಮನ ಹರಿಸದೆ ಇರುವುದನ್ನು ಅವರು ತೀಕ್ಷ್ಣವಾಗಿ ಟೀಕಿಸಿದರು. "ಇವರು ಬೇಷರಮ್ ಮಂತ್ರಿಗಳು," ಎಂದು ಕಿಡಿ ಕಾರಿದರು.

ಡಿ.ಸಿ.ಸಿ. ಬ್ಯಾಂಕ್ ಹಾಗೂ ಎನ್.ಎಸ್.ಎಸ್.ಕೆ ನಿರ್ವಹಣೆ ಕುರಿತಾಗಿ ಅವರು ಕಠಿಣ ಆರೋಪಗಳನ್ನು ಮಾಡಿದರು. ಬಿ.ಎಸ್.ಎಸ್.ಕೆ ಯ ಜಮೀನು ಡಿ.ಸಿ.ಸಿ. ಬ್ಯಾಂಕ್ ಕಬಳಿಸಿರುವುದು ಮತ್ತು ಎನ್.ಎಸ್.ಎಸ್.ಕೆ ಯನ್ನು ಮುಳುಗಿಸಲು ಮುಂದಾಗಿರುವ ಕ್ರಮಗಳ ಬಗ್ಗೆ ಅವರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಡಿ.ಸಿ.ಸಿ. ಬ್ಯಾಂಕ್ ಅಧ್ಯಕ್ಷರು ರೈತರಿಗೆ ಸಾಲ ನೀಡುವ ಬದಲು ಬಡ್ಡಿ ವಸೂಲಿ ಮಾಡುವವರಂತೆ ವರ್ತಿಸುತ್ತಿದ್ದಾರೆ ಎಂದು ಅವರು ಆರೋಪಿಸಿದರು. "ಈಶ್ವರ ಖಂಡ್ರೆ ತಮ್ಮ ತಮ್ಮನಿಗೆ ಬುದ್ದಿ ಹೇಳಬೇಕು. ರೈತರ ಮೇಲೆ ಆಟವಾಡುವುದನ್ನು ನಿಲ್ಲಿಸಬೇಕು," ಎಂದು ಖೂಬಾ ಒತ್ತಾಯಿಸಿದರು.

2020–21ರಲ್ಲಿ ಬೀದರ ಜಿಲ್ಲೆಯ ಸಕ್ಕರೆ ಕಾರ್ಖಾನೆಗಳೊಂದಿಗೆ ಸಭೆ ನಡೆಸಿ ಕಬ್ಬಿನ ಬೆಲೆಯನ್ನು ರೂ.1400ರಿಂದ ರೂ.2250ಕ್ಕೆ ಏರಿಸಲು ತಾವು ಕಾರಣಕರ್ತರಾಗಿದ್ದುದನ್ನು ಅವರು ನೆನಪಿಸಿದರು. "ಆದರೆ ಈಗ ಉಸ್ತುವಾರಿ ಸಚಿವರು ರೈತರ ಹೋರಾಟದತ್ತ ಮುಖ ಮಾಡಿಯೂ ನೋಡುತ್ತಿಲ್ಲ. ತಮ್ಮ ತಮ್ಮನ ಸಕ್ಕರೆ ಕಾರ್ಖಾನೆ ಉಳಿಸಿಕೊಳ್ಳುವುದರಲ್ಲಿ ಮಾತ್ರ ಆಸಕ್ತಿ," ಎಂದು ಆರೋಪಿಸಿದರು.

ಜಿಲ್ಲೆಯ ನಾಲ್ಕು ಶಾಸಕರು, ರೈತರ ಬೇಡಿಕೆ, ಡಿ.ಸಿ.ಸಿ. ಬ್ಯಾಂಕ್‌ನ ಅನ್ಯಾಯಗಳು ಮತ್ತು ಬಿ.ಎಸ್.ಎಸ್.ಕೆ ವಿಚಾರವನ್ನು ವಿಧಾನಸಭೆಯಲ್ಲಿ ಎತ್ತಿ ಹಿಡಿಯಬೇಕು ಎಂದು ಖೂಬಾ ಒತ್ತಾಯಿಸಿದರು.

"ರೈತರು ಸದುದ್ದೇಶದಿಂದ ಹೋರಾಟ ಮಾಡುತ್ತಿದ್ದಾರೆ. ಅವರಿಗೆ ನ್ಯಾಯ ಸಿಗಬೇಕು. ನಾನು ನನ್ನ ತನು–ಮನ–ಧನದಿಂದ ರೈತರ ಜೊತೆ ನಿಲ್ಲುತ್ತೇನೆ," ಎಂದು ಭಗವಂತ ಖೂಬಾ ರೈತರಿಗೆ ವಿಶ್ವಾಸ ನೀಡಿದರು.

ಧರಣಿಯಲ್ಲಿ ಬೀದರ ದಕ್ಷಿಣ ಶಾಸಕ ಶೈಲೇಂದ್ರ ಬೆಲ್ದಾಳೆ, ರೈತ ಮುಖಂಡರಾದ ಮಲ್ಲಿಕಾರ್ಜುನ ಸ್ವಾಮಿ, ಸಿದ್ರಾಮಪ್ಪಾ ಆಣದೂರೆ, ಶ್ರೀಮಂತ ಬಿರಾದಾರ, ಪ್ರಕಾಶ ಬಾವುಗೆ, ಶಾಂತಮ್ಮ ಮೂಲಗೆ, ಶಿವಲೀಲಾ ಹೋಳಸಮುದ್ರ, ವಿಜಯಕುಮಾರ ಬಾವುಗೆ, ವೀರಾರೆಡ್ಡಿ, ವಿಠಲ್ ರಾವ, ನಾಗಶೆಟ್ಟಿ, ಭೀಮರಾವ, ಖಮರ ಪಟೇಲ್ ಸೇರಿದಂತೆ ಅನೇಕ ರೈತ ನಾಯಕರು ಉಪಸ್ಥಿತರಿದ್ದರು.

## ತಾ.ಕ.ಸಾ.ಪ. ವತಿಯಿಂದ ವೃಕ್ಷ ಮಾತೆ ಸಾಲುಮರದ ತಿಮ್ಮಕ್ಕಗೆ ಶ್ರದ್ಧಾಂಜಲಿ



ಯುವ ಮಾರ್ಗ ಸುದ್ದಿ

**ಮಾನ್ವಿ,ನ.17**– ಪಟ್ಟಣದ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಕನ್ನಡ ಭವನದಲ್ಲಿ ತಾ.ಕ.ಸಾ.ಪ. ವತಿಯಿಂದ ವೃಕ್ಷ ಮಾತೆ ಸಾಲುಮರದ ತಿಮ್ಮಕ್ಕಗೆ ಶ್ರದ್ಧಾಂಜಲಿ ಸಲ್ಲಿಸಿ ನುಡಿನಮನ ಸಲ್ಲಿಸಲಾಯಿತು. ತಾ. ಕ.ಸಾ.ಪ ಅಧ್ಯಕ್ಷ ಶರಣಬಸವ ನೀರಮಾನ್ವಿ ಮಾತನಾಡಿ ಸಾಲುಮರದ ತಿಮ್ಮಕ್ಕ ಮರಗಿಡಗಳನ್ನೇ ತಮ್ಮ ಮಕ್ಕಳಂತೆ ಕಂಡು ಬೆಳೆಸುವ ಮೂಲಕ ವೃಕ್ಷಮಾತೆಯಾಗಿದ್ದಾರೆ ಅವರ ಪರಿಸರ ಕಾಳಜಿಗೆ ಕೇಂದ್ರ ಸರ್ಕಾರ ಪದ್ಮಶ್ರೀ ಪ್ರಶಸ್ತಿ ನೀಡಿ ಗೌರವಿಸಿದೆ ಎಂದು ತಿಳಿಸಿದರು.

ಹಿರಿಯ ಸಾಹಿತಿ ರಮೇಶಬಾಬು ಯಾಳಗಿ, ಜಿಲ್ಲಾ ಗೌರವ ಕಾರ್ಯದರ್ಶಿ ತಾಯಪ್ಪ ಬಿ.ಹೊಸೂರು, ಮಹಿಳಾ ಪ್ರತಿನಿಧಿ ಅಂಬಮ್ಮ ಪ್ರತಾಪಸಿಂಗ್, ಮಾನ್ವಿ ತಾ.ಕ.ಸಾ.ಪ. ಗೌರವ ಕಾರ್ಯದರ್ಶಿ ಲಕ್ಷ್ಮಣ್ ಜಾನೇಕಲ್, ಜಿ.ಎಸ್. ಬಾಲಾಜಿಸಿಂಗ್ ಮಾನ್ವಿ, ರಾಮು ಹೊಳೆಯಪ್ಪನವರ್, ರವಿಶರ್ಮ, ಹನುಮಂತಪ್ಪ ಕೊಟ್ನೆಕಲ್, ಪ್ರಾಧ್ಯಾಪಕ ಚನ್ನಬಸಪ್ಪ, ಯಲ್ಲಪ್ಪ ನಿಲೋಗಲ್, ಡಿ.ಬಸನಗೌಡ, ಶಿವಕುಮಾರ ಸೇರಿದಂತೆ ಇನ್ನಿತರರಿದ್ದರು.

## ತಾಲೂಕು ಕಮ್ಮವಾರಿ ಸಂಘದ ವತಿಯಿಂದ ಕಾರ್ತಿಕಮಾಸದ ವನಭೋಜನ ಕಾರ್ಯಕ್ರಮ



ಯುವ ಮಾರ್ಗ ಸುದ್ದಿ

**ಮಾನ್ವಿ,ನ.17**–ಪಟ್ಟಣದ ಕಾಕತೀಯ ವಿದ್ಯಾಸಂಸ್ಥೆ ಆವರಣದಲ್ಲಿ ತಾಲೂಕು ಕಮ್ಮವಾರಿ ಸಂಘದ ವತಿಯಿಂದ ನಡೆದ ಕಾರ್ತಿಕ ಮಾಸದ ವನಭೋಜನ ಕಾರ್ಯಕ್ರಮಕ್ಕೆ ರಾಜ್ಯ ಸಣ್ಣ ನೀರವಾರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್.ಎಸ್, ಬೋಸರಾಜು ಉದ್ಘಾಟಿಸಿ ಮಾತನಾಡಿ ತಾಲೂಕಿನಲ್ಲಿ ಕಮ್ಮ ಸಮುದಾಯದವರು ಶಿಕ್ಷಣ ಹಾಗೂ ಕೃಷಿ ಸೇರಿದಂತೆ ವಿವಿಧ ರಂಗದಲ್ಲಿ ತಮ್ಮನ್ನು ತೊಡಗಿಸಿಕೊಂಡು ಅಭಿವೃದ್ದಿ ಹೊಂದುವುದರೊಂದಿಗೆ ಈ ಭಾಗದಲ್ಲಿ ಶಾಲೆಗಳನ್ನು ಪ್ರಾರಂಭಿಸುವ ಮೂಲಕ ಶೈಕ್ಷಣಿಕ ಅಭಿವೃದ್ದಿಗೆ ಹಾಗೂ ಕೃಷಿ ಕ್ಷೇತ್ರದ ಅಭಿವೃದ್ದಿಗೆ ಶ್ರಮಿಸುತ್ತಿದ್ದಾರೆ ಕಾರ್ತಿಕ ಮಾಸ ಅತ್ಯಂತ ಪವಿತ್ರವಾದ ಮಾಸವಾಗಿದ್ದು ಈ ಮಾಸದಲ್ಲಿ ಕಮ್ಮ ಸಮುದಾಯದವರು ಒಟ್ಟಿಗೆ ಸೇರಿ ಕಾರ್ತಿಕಮಾಸದ ವನಭೋಜನ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದು ಉತ್ತಮವಾದ ಕಾರ್ಯವಾಗಿದ್ದು ಕಮ್ಮ ಸಮುದಾಯದವರು ನಿರ್ಮಿಸುವ ಕಮ್ಮ ಸಮುದಾಯ ಭವನಕ್ಕೆ ಸರ್ಕಾರದಿಂದ ಅಭಿವೃದ್ದಿ ಅನುದಾನದಲ್ಲಿ 20 ಲಕ್ಷ ಮಂಜೂರು ಮಾಡಿಸುವುದಾಗಿ ಬರವಸೆ ನೀಡಿದರು.

ಶಾಸಕ ಹಂಪಯ್ಯನಾಯಕ , ಮಾಜಿ ಶಾಸಕರಾದ ಬಸವನಗೌಡ ಬ್ಯಾಗವಾಟ, ರಾಜಾ ವೆಂಕಟಪ್ಪ ನಾಯಕ ಮಾತನಾಡಿದರು,

ಕಾರ್ಯಕ್ರಮದಲ್ಲಿ ಕಮ್ಮವಾರಿ ಸಂಘದ ವತಿಯಿಂದ ನಿರ್ಮಿಸಲಿರುವ ಅಂತರಾಷ್ಟ್ರೀಯ ಗುಣಮಟ್ಟದ ಶಾಲೆ ಹಾಗೂ ಕಾಲೇಜು ನಿರ್ಮಾಣಕ್ಕೆ 2 ಎಕರೆ ಭೂಮಿಯನ್ನು ದಾನವಾಗಿ ನೀಡಿದ ವೇಮಲೂರಿ ಸತ್ಯನಾರಾಯಣ ರವರನ್ನು ಹಾಗೂ ಬ್ಯಾಡ್ಮಿಟನ್ ಕ್ರೀಡಾಪಟ್ಟು ರೋಹನ್ ಕರುಟೂರಿ ಹಾಗೂ ಅಖಿಲ ಕರ್ನಾಟಕ ಕಮ್ಮವಾರಿ ಸಂಘದ ಅಧ್ಯಕ್ಷರಾದ ಲಯನ್ ಗಾರಪಾಟಿ ರಾಮಕೃಷ್ಣ ರವರನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ತಿಕ ಮಾಸದ ಅಂಗವಾಗಿ ಕಮ್ಮ ಸಮುದಾಯದವರು ಸಾಮೂಹಿಕವಾಗಿ ಶ್ರೀ ರಮಾ ಸತ್ಯನಾರಾಯಣ ಸ್ವಾಮಿ ವೃತ ಪೂಜೆಯನ್ನು ಮಾಡಿದರು, ಕಾರ್ತಿಕ ಮಾಸ ಮಹತ್ವ ಕುರಿತು ಡಾ.ವಾಣಿ ಕುಮಾರಿ ಮದ್ದುಕೂರಿ ರಾಜಮಂಡ್ರಿ, ಹಾಗೂ ಕೆ.ಸಾಯಿ ಪವನ್ ಶರ್ಮ ರವರಿಂದ ಪ್ರವಚನ ಹಾಗೂ ಕಾರ್ತಿಕಮಾಸದ ವನಭೋಜನ ನಡೆಯಿತು. ಕಾಕತೀಯ ವಿದ್ಯಾಸಂಸ್ಥೆಯ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು, ಬಾಲಕಿಯರಿಗಾಗಿ ಮತ್ತು ಮಹಿಳೆಯರಿಗಾಗಿ ಲೆಮನ್ ಸ್ಪೂನ್ ಗೇಮ್, ಸಂಗೀತ ಕುರ್ಚಿ, ಸೇರಿದಂತೆ ನೃತ್ಯ,ವಿವಿಧ ಆಟೋಟಗಳನ್ನು ಮನೋರಂಜನೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ನಯೋಪ್ರ ಅಧ್ಯಕ್ಷರಾದ ಅಬ್ದುಲ್ ಗಫೂರ್ ಸಾಬ್,ಶರಣಯ್ಯನಾಯಕ ಗುಡದಿನ್ನಿ, ತಾಲೂಕು ಕಮ್ಮವಾರಿ ಸಂಘದ ಅಧ್ಯಕ್ಷರಾದ ನೆಕ್ಕಂಟಿ ಶ್ರೀನಿವಾಸರಾವ್ , ಕಾರ್ಯದರ್ಶಿ ಗೊಡವರ್ತಿ ಶ್ರೀನಿವಾಸ, ಕಾಕತೀಯ ಎಜ್ಯುಕೇಶನ್ ಸೋಸೈಟಿ ಅಧ್ಯಕ್ಷರಾದ ಗೋಡವರ್ತಿ ಸತ್ಯನಾರಾಯಣ, ಕಾರ್ಯದರ್ಶಿ ಸಂಕರ ಶ್ರೀನಿವಾಸ, ಕಾಕತೀಯ ಸಹಕಾರಿಯ ಅಧ್ಯಕ್ಷರಾದ ಜಿ.ಪಾಪರಾವ್,ಪುಟ್ಟಪ್ರಸಾದ್, ಟಿ.ರಾಮಕೃಷ್ಣ, ಬಿ.ಉಮಾಮೇಶ್ವರರಾವ್, ಎಸ್,ಮಲ್ಲಿಕಾರ್ಜುನರಾವ್, ಗೊಡವರ್ತಿ ಸುರೇಶಕುಮಾರ, ಎಸ್,ರಮೇಶ, ಕೆ.ಮಾರ್ಖಂಡೆಯ್ಯಲು, ಉಂಡ ವಲ್ಲಿ ರಾಂಬಾಬು,ವೈಟ್ಲ ರವಿ,ಡಿ, ರಾಮಕೃಷ್ಣ ಸೇರಿದಂತೆ ತಾಲೂಕಿನ ಕಮ್ಮ ಸಮುದಾಯದವರು ಭಾಗವಹಿಸಿದರು.

## ಸಮಾಜಶಾಸ್ತ್ರವು ಸಮಾಜ ವಿಜ್ಞಾನಗಳ ತಾಯಿಯಾಗಿ ಅಧ್ಯಯನ ಮಾಡುತ್ತದೆ

ಯುವ ಮಾರ್ಗ ಸುದ್ದಿ



**ಲಿಂಗಸುಗೂರ,ನ.17**– ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಲಿಂಗಸುಗೂರ ಐಕ್ಯೂಎಸಿ ಮತ್ತು ಸಮಾಜಶಾಸ್ತ್ರ ವಿಭಾಗದ ಸಹಯೋಗದಿಂದ ಒಂದು ದಿನ ವಿಶೇಷ ಉಪನ್ಯಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಡಾ.ಸಾಯಿಬಣ್ಣ ಮೂಡಬೂಳ ಮಾತನಾಡುತ್ತಾ,ಸಮಾಜಶಾಸ್ತ್ರವು ಸಮಾಜ ವಿಜ್ಞಾನಗಳ ತಾಯಿಯಾಗಿ ಅಧ್ಯಯನ ಮಾಡುತ್ತದೆ ಸಮಾಜದ ಸತ್ಯ ಸಂಗತಿಗಳನ್ನು ಹಾಗೂ ಸಮಾಜದಿಂದ ದೂರ ಉಳಿದಿರುವ ಮಾನವನ ಜೀವನದ ಗೌಪ್ಯಾತೆಯ ರೂಡಿಗಳು, ಸಂಪ್ರದಾಯಗಳು, ಆಚರಣೆಗಳು ಹೊರಗಡೆ ತರಲು ಅಧ್ಯಯನ ಮಾಡುವುದು, ಸಮಾಜಶಾಸ್ತ್ರ ಒಂದು ಐಚ್ಚಿಕ ವಿಷಯವನ್ನಾಗಿ ತೆಗೆದುಕೊಂಡು ಓದಿದರೆ ನಿಮಗೆ ಸಾಕಷ್ಟು ವಿವಿಧ ಇಲಾಖೆಗಳಲ್ಲಿ ಉದ್ಯೋಗಾವಕಾಶಗಳು ಸಿಗುತ್ತವೆ ಎಂದು ಹೇಳಿದರು.

ಈ ಕಾರ್ಯಕ್ರಮದ ಉದ್ಘಾಟಕರಾಗಿ ಡಾ. ವೆಂಕಟನಾರಾಯಣ ಎಂ ಪ್ರಾಂಶುಪಾಲರು, ಅಧ್ಯಕ್ಷತೆಯನ್ನು ವಿಭಾಗದ ಮುಖ್ಯಸ್ಥರಾದ ಡಾ.ಸಂಗನಗೌಡ ಮಾತನಾಡುತ್ತಾ ಸಮಾಜಶಾಸ್ತ್ರ ವಿಷಯವನ್ನು ಕಲಿಯುವಾಗ ಪುಸ್ತಕ ಓದುವಕ್ಕಿಂತ ಸಮಾಜವನ್ನು ಓದಿ ಎಂದು ಹೇಳಿದರು. ಗೌರವ ಉಪಸ್ಥಿತಿರಾಗಿ , ಐಕ್ಯೂಎಸಿ ಸಂಚಾಲಕರಾದ ಗಣೇಶ್ ದರ್ಬಿ, ಡಾ. ಮರೆಪ್ಪ ಉಪನ್ಯಾಸಕರು ಉಪಸ್ಥಿತರಿದ್ದರು. ಕಾರ್ಯಕ್ರಮ ನಿರೂಪಣೆಯನ್ನು ಕು.ಮೌನೇಶ ನೆರವೇರಿಸಿದರು, ಕು.ಮಲ್ಲಿಕಾ ಸ್ವಾಗತಿಸಿದರು, ಕು. ಯಲ್ಲಪ್ಪ ವಂದಿಸಿದರು

# ಉಡಮಗಲ್ ಖಾನಾಪುರದಲ್ಲಿ ಮಕ್ಕಳ ದಿನಾಚರಣೆ



ಯುವ ಮಾರ್ಗ ಸುದ್ದಿ

**ರಾಯಚೂರು,ನ.17–** ರಾಯಚೂರು ತಾಲೂಕಿನ ಸರ್ಕಾರಿ ಪ್ರೌಢಶಾಲೆ ಉಡಮಗಲ್ ಖಾನಾಪುರದಲ್ಲಿ ನವೆಂಬರ್ 14ರಂದು ಮಕ್ಕಳ ದಿನಾಚರಣೆ ಕಾರ್ಯಕ್ರಮವು ಅದ್ದೂರಿಯಾಗಿ ನಡೆಯಿತು.

ಪಂಡಿತ್ ಜವಾಹರಲಾಲ ನೆಹರು ಅವರ ಭಾವಚಿತ್ರಕ್ಕೆ ಶಾಲಾ ಮಂತ್ರಿಮಂಡಲದ ಸದಸ್ಯರು, ಎಸ್.ಡಿ.ಎಮ್.ಸಿ. ಸದಸ್ಯರು ಮಾಲಾರ್ಪಣೆ ಮಾಡಿದರು. ವಿದ್ಯಾರ್ಥಿಗಳು ಪುಷ್ಪನಮನ ಸಲ್ಲಿಸಿದರು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಗಣ್ಯರು ಮತ್ತು ಅಧಿಕಾರಿಗಳು ಇದೆ ವೇಳೆ ಬಹುಮಾನ ನೀಡಿದರು. ಕಾರ್ಯಕ್ರಮದಲ್ಲಿ ಮೊದಲಿಗೆ ಸಂವಿಧಾನ ಪೀಠಿಕೆಯನ್ನು ಸಾಮೂಹಿಕವಾಗಿ ಹೇಳಿಸಲಾಯಿತು.

ಡಯಟ್ ಕಾಲೇಜಿನ ಉಪನ್ಯಾಸಕರಾದ ರಾಜೇಂದ್ರ ಶಾ ಸಸಿಗೆ ನೀರು ಹಾಕಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಇಲ್ಲಿನ ಮುಖ್ಯ ಗುರುಗಳು ಮತ್ತು ಶಿಕ್ಷಕ ವೃಂದದವರು ಕ್ರಿಯಾಶೀಲರಾಗಿ ಕಾರ್ಯ ನಿರ್ವಹಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದರು. ಶಾಲಾ ಮುಖ್ಯ ಗುರು ವೀರೇಶ್ ಅಂಗಡಿ ಪ್ರಾಸ್ತಾವಿಕ ಮಾತನಾಡಿ, ಸರ್ಕಾರದಿಂದ ಮತ್ತು ಶಿಕ್ಷಣ ಇಲಾಖೆಯಿಂದ ಮಕ್ಕಳಿಗೆ ದೊರೆಯುವ ಶೈಕ್ಷಣಿಕ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು. ಹಾಗೂ ಎಸ್ಎಸ್ಎಲ್‌ಸಿ ವಿದ್ಯಾರ್ಥಿಗಳ ಫಲಿತಾಂಶಕ್ಕಾಗಿ ಕೈಗೊಂಡ ಶೈಕ್ಷಣಿಕ ಕಾರ್ಯ ಚಟುವಟಿಕೆ ಕುರಿತು ಮಾತನಾಡಿದರು.

ಶಾಲೆಯ ಕನ್ನಡ ಕಲಾ ಶಿಕ್ಷಕರಾದ ಡಾ. ದಂಡಪ್ಪ ಬಿರಾದಾರ ಮಾತನಾಡಿದರು. ಬಳಿಕ ಮಕ್ಕಳಿಂದ ಆಕರ್ಷಕವಾದ ಹಾಡುಗಳ ನೃತ್ಯ ಕಾರ್ಯಕ್ರಮ ಜರುಗಿದವು. ಎಸ್‌ಡಿಎಂಸಿ ಸದಸ್ಯರಾದ ದಸ್ತಗಿರಿ ಗೋವಿಂದು ತಿಮ್ಮಪ್ಪ, ರವಿಕುಮಾರ್, ಸುನಿತಾ, ಶಾಲಾ ಶಿಕ್ಷಕರಾದ ನಪಿಜ್ ಅಂಜುಮ, ವೀಣಾ ಕುಲಕರ್ಣಿ, ಸಾವಿತ್ರಿ, ಸರಸ್ವತಿ, ಶಿವಲೀಲಾ, ವಿವಿಧ ಗ್ರಾಮಗಳ ವಿದ್ಯಾರ್ಥಿಗಳ ಪಾಲಕರು–ಪೋಷಕರು ಹಾಗೂ ಶಾಲಾ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಶಿಕ್ಷಕಿ ಸರಸ್ವತಿ ನಿರೂಪಿಸಿದರು. ನೀಲಕಂಠ ನಿರ್ವಹಿಸಿದರು. ಸೂಗಮ ಮತ್ತು ಭಾವನಾ ಪ್ರಾರ್ಥಿಸಿದರು.

# ನಗರ ಕೇಂದ್ರ ಗ್ರಂಥಾಲಯದಲ್ಲಿ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ದಿನಾಚರಣೆ



ಯುವ ಮಾರ್ಗ ಸುದ್ದಿ

**ರಾಯಚೂರು,ನ.17–**ನವೆಂಬರ್ 14 ರಿಂದ ನವೆಂಬರ್ 20ರವರೆಗೆ ಆಚರಿಸಲ್ಪಡುವ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹವನ್ನು ನಗರದ ನಗರ ಕೇಂದ್ರ ಗ್ರಂಥಾಲಯದ ಕಚೇರಿಯಲ್ಲಿ ಇತ್ತೀಚೆಗೆ ಆಚರಿಸಲಾಯಿತು.

ಜವಾಹರಲಾಲ್ ನೆಹರು ಅವರ ಜನ್ಮದಿನದ ಅಂಗವಾಗಿ ಮಕ್ಕಳ ದಿನಾಚರಣೆ ಹಾಗೂ ಪುಸ್ತಕ ಪ್ರದರ್ಶನ ಕಾರ್ಯಕ್ರಮ ಕೂಡ ನಡೆಯಿತು. ಮುಖ್ಯ ಗ್ರಂಥಾಲಯಾಧಿಕಾರಿ ನಿರ್ಮಲಾ ಹೆಚ್ ಹೊಸೂರು ಅವರು ಜವಾಹರಲಾಲ್ ನೆಹರು ಅವರ ಭಾವ ಚಿತ್ರಕ್ಕೆ ಪೂಜೆ ಸಲ್ಲಿಸಿದರು. ಗ್ರಂಥಾಲಯದಲ್ಲಿ ಓದುವ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗಾಗಿ ಮತ್ತು ಮಡ್ಡಿ ಪೇಟೆಯ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಪ್ರಬಂಧ, ಚಿತ್ರಕಲೆ, ರಂಗೋಲಿ ಸ್ಪರ್ಧೆ, ಭಾವಗೀತೆ, ಜನಪದ ಗೀತೆ ಹಾಗೂ ಇನ್ನಿತರ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಸಿಬ್ಬಂದಿ ರಾಘವೇಂದ್ರರಾವ್ ಕೆ, ಮರೆಪ್ಪ, ರಾಜಶ್ರೀ ಎಸ್., ಸಣ್ಣ ತಿಮಲಮ್ಮ, ಮಾರ್ತಮ್ಮ, ಪದ್ಮಾವತಿ, ಪಾಂಡುರಂಗ, ವಿನೋದಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

# ಚಿತ್ತಾಪುರದಲ್ಲಿ ಯಶಸ್ವಿಯಾಗಿ ಜರುಗಿದ ಆರ್.ಎಸ್.ಎಸ್ ಪಥ ಸಂಚಲನ



**ಚಿತ್ತಾಪುರ:ನ.17–** ಪಟ್ಟಣದಲ್ಲಿ ಪೊಲೀಸರ ಸರ್ಪಗಾವಲಿನಲ್ಲಿ ಸುಮಾರು 300 ಜನ ಗಣವೇಶಧಾರಿಗಳಿಂದ ಯಶಸ್ವಿಯಾಗಿ ಆರ್.ಎಸ್.ಎಸ್ ಪಥ ಸಂಚಲನವು ನಡೆಯಿತು.

ಪಟ್ಟಣದ ಬಜಾಜ್ ಕಲ್ಯಾಣ ಮಂಟಪದಿಂದ ಆರಂಭವಾದ ಪಥ ಸಂಚಲನವು ಬಸವೇಶ್ವರ ವೃತ್ತ, ಬಸ್ ನಿಲ್ದಾಣ ವೃತ್ತ, ಅಂಬೇಡ್ಕರ್ ವೃತ್ತ, ರಾಘವೇಂದ್ರ ಖಾನಾವಳಿ, ಕೆನರಾ ಬ್ಯಾಂಕ್, ತಾಪಂ ಕಚೇರಿ ವೃತ್ತದ ಮೂಲಕ ಬಜಾಜ್ ಕಲ್ಯಾಣ ಮಂಟಪಕ್ಕೆ ತಲುಪಿತು.

300 ಜನ ಗಣವೇಶಧಾರಿಗಳು ಹಾಗೂ 50 ಜನ ಘೋಷವಾದಕರಿಂದ ಪಥ ಸಂಚಲನ ನಡೆಯಿತು.

ಭಾರತ್ ಮಾತಾಕಿ ಜೈ, ವಂದೇ ಮಾತರಂ ಎಂದು ಸಹಸ್ರಾರು ಜನರು ಘೋಷಣೆ ಕೂಗಿದದರು.ಇದೇ ವೇಳೆ ಪತಸಂಚಲನದಲ್ಲಿ ಭಾಗವಹಿಸಿದ ಗಣವೇಶದಾರಿಗಳಿಗೆ ಹಲವು ಕುಟುಂಬದ ಸದಸ್ಯರು ಪುಷ್ಪಾರ್ಚನೆ ಮಾಡಿದರು.

ಈ ಸಂದರ್ಭದಲ್ಲಿ ಸಾವಿರಾರು ಪೊಲೀಸರು, ಹಲವು ಮುಖಂಡರು ಸೇರಿದಂತೆ ಇತರರು ಇದ್ದರು.

# ವಾಲ್ಮೀಕಿ ವಿಶ್ವವಿದ್ಯಾಲಯದಲ್ಲಿ ವೃಕ್ಷಮಾತೆಗೆ ಸಂತಾಪ

ಯುವ ಮಾರ್ಗ ಸುದ್ದಿ



**ರಾಯಚೂರು,ನ.17–** ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಹಾಲ್‌ನಲ್ಲಿ ನವೆಂಬರ್ 15ರಂದು ಸಾಲುಮರದ ತಿಮ್ಮಕ್ಕ ಅವರ ನಿಧನಕ್ಕೆ ಮೌನಾಚರಣೆ ಮೂಲಕ ಸಂತಾಪ ಸೂಚಿಸಲಾಯಿತು.ಕುಲಪತಿ ಪ್ರೊ.ಶಿವಾನಂದ ಕೆಳಗಿನಮನಿ ಅವರು ಮಾತನಾಡಿ, ಪದ್ಮಶ್ರೀ ಪುರಸ್ಕೃತರಾದ ಸಾಲುಮರದ ತಿಮ್ಮಕ್ಕನವರು ನಿಧನರಾದ ಸುದ್ದಿ ತಿಳಿದು ವಿಷಾದವಾಯಿತು. ಗಿಡ–ಮರಗಳನ್ನು ಬೆಳೆಸುವುದರೊಂದಿಗೆ ಪರಿಸರ ಸಂರಕ್ಷಣೆಗೆ ವಿಶೇಷ ಕಾಳಜಿವಹಿಸಿ ಜೀವಿಸಿದ ಅವರ ಶೈಲಿಯೇ ಎಲ್ಲರಿಗೂ ಪ್ರೇರಣೆಯಾಗಬೇಕು. ಅವರು ಪರಿಸರ ಸಂರಕ್ಷಣೆ ಕುರಿತು ಅರಿವು, ಜಾಗೃತಿ ಮೂಡಿಸುತ್ತಿದ್ದರು. ನಮ್ಮ ನೆಲ ಜಲ ಪರಿಸರ ಇವುಗಳ ಸಂರಕ್ಷಣೆ ನಮ್ಮೆಲ್ಲರ ಹೊಣೆ ಎಂಬ ಸಾಮಾನ್ಯ ಪರಿಸರ ಪ್ರಜ್ಞೆಯ ಅರಿವಾದರೆ ತಿಮ್ಮಕ್ಕನಂತವರನ್ನು ಸ್ಫೂರ್ತಿಯಾಗಿ ಪಡೆದುಕೊಂಡು ನಮ್ಮ ನಾಡ ಭೂಮಿಯನ್ನು ಸದಾ ಹಸಿರಾಗಿಡಬಹುದು. ತಮ್ಮ ಬಹುಪಾಲು ಜೀವಿತ ಕಾಲವನ್ನು ಹಸಿರೇ ಉಸಿರೆಂದು ಭಾವಿಸಿ ಪರಿಸರ ಸೇವೆ ಮತ್ತು ಸಂರಕ್ಷಣೆಗಾಗಿ ಮುಡಿಪಾಗಿಟ್ಟು, ಅಗಲಿದ ಈ ಮಹಾ ಚೇತನಕ್ಕೆ ನಮನಗಳೊಂದಿಗೆ ಅವರ ಆತ್ಮಕ್ಕೆ ಚಿರಶಾಂತಿ ಕೋರುತ್ತೇನೆ ಎಂದು ತಿಳಿಸಿದರು.

ಕುಲಸಚಿವರಾದ ಡಾ.ಎ.ಚನ್ನಪ್ಪ ಅವರು ಮಾತನಾಡಿ, ಸಾಲುಮರದ ತಿಮ್ಮಕ್ಕನವರ ಜೀವನ ಸಾಧನೆ ಸಮಾಜಕ್ಕೆ ಮಾದರಿಯಾಗಿದೆ. ಅನಕ್ಷರಸ್ಥೆಯಾಗಿದ್ದರೂ ನಿಸರ್ಗದ ಜ್ಞಾನದೊಂದಿಗೆ ಮರಗಳನ್ನೆ ಮಕ್ಕಳೆಂದು ಭಾವಿಸಿ ವೃಕ್ಷವನವನ್ನು ನಿರ್ಮಿಸಿದ್ದಾರೆ. ಅವರು ನಮ್ಮನ್ನಗಲಿದರೂ ನಮ್ಮ ಮನದಾಳದಲ್ಲಿ ಅವರು ಎಂದಿಗೂ ಜೀವಂತವಾಗಿದ್ದಾರೆ. ಅವರ ತ್ಯಾಗಮಯ ಜೀವನ ಮರೆಯಲಾರದ್ದು ಎಂದು ಹೇಳಿದರು.

ಉಪಕುಲಸಚಿವರಾದ ಡಾ.ಕೆ.ವೆಂಕಟೇಶ ಅವರು ಮಾತನಾಡಿ, ಮಾಗಡಿ ತಾಲ್ಲೂಕಿನಲ್ಲಿ ರಸ್ತೆ ಬದಿ ಆಲದ ಮರಗಳನ್ನು ನೆಟ್ಟು ಬೆಳೆಸಿದ ಅವರು ಸಾಲುಮರದ ತಿಮ್ಮಕ್ಕ ಎಂದೇ ಚಿರಪರಿಚಿತರಾದರು. ಸಸಿಗಳನ್ನು ಮಕ್ಕಳಂತೆ ಪ್ರೀತಿಯಿಂದ ಸಾಕಿ ಸಲಹಿದ್ದಾರೆ. ಅವರು ಬದುಕಿದ ದಾರಿ ಎಲ್ಲರಿಗೂ ಮಾದರಿಯಾಗಬೇಕು, ತಾವು ನೆಟ್ಟ ಸಸಿಗಳನ್ನು ತಮ್ಮ ಮಕ್ಕಳೆಂದು ತಿಳಿದು ಅವರು ಜೀವನದ ಸಾರ್ಥಕತೆಯನ್ನು ಕಂಡುಕೊಂಡರು. ಅವರ ಅಗಲಿಕೆ ನಮ್ಮೆಲ್ಲರಿಗೂ ದುಖಃವನ್ನುಂಟು ಮಾಡಿದೆ. ಅವರನ್ನು ಮಾದರಿಯಾಗಿಟ್ಟುಕೊಂಡು ಭವಿಷ್ಯದ ದೃಷ್ಟಿಯಿಂದ ಬರುವ ಪೀಳಿಗೆಗೆ ಅವರ ಪರಿಸರ ಪ್ರೇಮ ಮತ್ತು ಬದುಕಿದ ರೀತಿಯನ್ನು ತೋರಿಸಿಕೊಡಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಹಣಕಾಸು ಅಧಿಕಾರಿ ಡಾ.ಸುಯಮೀಂದ್ರ ಕುಲಕರ್ಣಿ, ಡೀನರಾದ ಪ್ರೊ.ಪಾರ್ವತಿ ಸಿ.ಎಸ್., ಡಾ.ಲತಾ ಎಂ.ಎಸ್., ವಿದ್ಯಾರ್ಥಿ ಕಲ್ಯಾಣಾಧಿಕಾರಿ ಡಾ.ಜಿ.ಎಸ್.ಬಿರಾದಾರ, ಉಪನ್ಯಾಸಕರು, ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ತಿಮ್ಮಕ್ಕನವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಶ್ರದ್ಧಾಂಜಲಿ ಅರ್ಪಿಸಿದರು.

# ಬ್ರಿಟಿಷ್ ಸಾಮ್ರಾಜ್ಯದ ವಿರುದ್ಧ ಹೋರಾಡಿದ ಬಿರ್ಸಾ ಮುಂಡಾ

**ವಾಡಿ, ನ.17–**ದೇಶದಲ್ಲಿನ ಅಸಮಾನತೆ ಹೋಗಲಾಡಿಸಲು, ಬುಡಕಟ್ಟು ಜನಾಂಗದ ಏಳಿಗೆ ಬಯಸಿದ್ದ ಬಿರ್ಸಾ ಮುಂಡಾ ಬ್ರಿಟಿಷ್ ರ ವಿರುದ್ಧ ಹೋರಾಡು ಮೂಲಕ ಶೋಷಿತರ ಸಮುದಾಯಕ್ಕೆ ಧ್ವನಿಯಾಗಿದ್ದರು ಎಂದು ಕಲಬುರಗಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪ್ರೀತಿ ಚಂದ್ರಶೇಖರ ದೊಡ್ಡಮನಿ ಹೇಳಿದರು.

ಸಮೀಪದ ಲಾಡ್ಲಾಪುರ ಗ್ರಾಪಂ ವ್ಯಾಪ್ತಿಯ ಡಿಗ್ಗಿ ತಾಂಡಾ ಪ್ರದೇಶದಲ್ಲಿರುವ ಏಕಲವ್ಯ ಮಾದರಿ ವಸತಿ ಶಾಲಾ ಆವರಣದಲ್ಲಿ ಬುಡಕಟ್ಟು ಜನಾಂಗದ ನಾಯಕ ಬಿರ್ಸಾ ಮುಂಡಾ ಅವರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. 19ನೇ ಶತಮಾನದ ಬುಡಕಟ್ಟು ಸಮುದಾಯದ ನಾಯಕ ಬಿರ್ಸಾ ಮುಂಡಾ ಅವರ ಕೊಡುಗೆ ನಮ್ಮ ದೇಶಕ್ಕೆ ಅಪಾರವಾಗಿದೆ. ನಮ್ಮ ನೆಲದ ಸಂಸ್ಕೃತಿ, ದೇಶದ ಭವಿಷ್ಯ ಕಾಪಾಡುವ ನಿಟ್ಟಿನಲ್ಲಿ ಅವರು ಬ್ರಿಟಿಷ್ ಸಾಮ್ರಾಜ್ಯದ ವಿರುದ್ಧ ಹೋರಾಟ ನಡೆಸಿದ್ದರು. ಶೋಷಿತ ಸಮುದಾಯಗಳ ಮೇಲೆ ನಡೆಯುವ ಘೋರ ಅನ್ಯಾಯವನ್ನು ಅವರು ಮೆಟ್ಟಿ ನಿಲ್ಲುತ್ತಿದ್ದರು ಎಂದು ಹೇಳಿದರು.

ಏಕಲವ್ಯ ಮಾದರಿ ವಸತಿ ಶಾಲೆಯ ಪ್ರಾಂಶುಪಾಲ ಸುನಿಲ್ ಕುಮಾರ್ ಬಾಲರ್ ಮಾತನಾಡಿ, ಕಾಡಿನಲ್ಲಿ ನೆಲೆಸುವ ಬುಡಕಟ್ಟು ಜನಾಂಗಕ್ಕೆ ಬಿರ್ಸಾ ಮುಂಡಾ ಅವರು ಬೆನ್ನೆಲುಬಾಗಿ ನಿಲ್ಲುತ್ತಿದ್ದರು. ಆಗ ಬಿರ್ಸಾನಿಗೆ 13 ವರ್ಷ ವಯಸ್ಸೂ ಆಗಿರಲಿಲ್ಲ. ಧರ್ಮ ಪ್ರಚಾರಕರು ತಮ್ಮ ಧರ್ಮದ ಶ್ರೇಷ್ಠತೆಯನ್ನು ಕೊಂಡಾಡುತ್ತಲೇ



ಆದಿವಾಸಿಗಳ ಸಂಸ್ಕೃತಿಯನ್ನು ಬಿಂಬಿಸುವ ಕೆಲಸ ಅವರು ಮಾಡಿದ್ದರು. ಮತ್ತೊಂದೆಡೆ ಬಿಳಿಯರ ಕಾನೂನುಗಳು ಮತ್ತು ವ್ಯಾಪಾರಸ್ಥರ ಕಪಟತನಗಳ ನಡುವೆ ತನ್ನ ಜನ ತಮ್ಮ ಭೂಮಿಗಳನ್ನು ಕಳೆದುಕೊಂಡು ದಿನಗೂಲಿಗಳಾಗುತ್ತಿರುವುದನ್ನು ನೋಡಿ ಆತ ಆತಂಕ ಗೊಂಡಿದ್ದ. ಇಂಥಹ ದಿನಗಳಲ್ಲೇ ಬ್ರಿಟಿಷರ ವಿರುದ್ಧ ಆದಿವಾಸಿಗಳು ದಂಗೆ ಏಳಲಾರಂಭಿಸಿದ್ದರು. ವಿದ್ಯಾರ್ಥಿಗಳು ಸಹ ಈ ದೇಶಕ್ಕಾಗಿ ಮಡಿದಿರುವ ಮಹಾನ್ ನಾಯಕರ ಜೀವನ ಚರಿತ್ರೆಗಳನ್ನು ಪರಿಚಯಿಸಿಕೊಳ್ಳಬೇಕು ಎಂದು ಹೇಳಿದರು. ವಸತಿ ಶಾಲೆಯ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಪೊ?ಷಕರು ಪಾಲ್ಗೊಂಡಿದ್ದರು

# ಬಂಜಾರ ಭವನಕ್ಕೆ ಪಾಲಿಕೆ ಕಚೇರಿ ಸ್ಥಳಾಂತರಕ್ಕೆ ವಿರೋಧ

**ಬೀದರ್, ನ.17–**ಮಹಾನಗರ ಪಾಲಿಕೆ ಕಚೇರಿಯನ್ನು ನಗರದ ಬಂಜಾರ ಭವನಕ್ಕೆ ಸ್ಥಳಾಂತರ ಮಾಡುವುದನ್ನು ಆಲ್ ಇಂಡಿಯಾ ಬಂಜಾರ ಸೇವಾ ಸಂಘ ತೀವ್ರವಾಗಿ ವಿರೋಧಿಸಿದೆ.

ಸಂಘದ ಪದಾಧಿಕಾರಿಗಳು ಜಿಲ್ಲಾ ಘಟಕದ ಅಧ್ಯಕ್ಷ ಸುಧಾಕರ ರಾಠೋಡ್ ಅವರ ನೇತೃತ್ವದಲ್ಲಿ ನಗರದಲ್ಲಿ ಶನಿವಾರ ನಿಯೋಗದಲ್ಲಿ ಜಿಲ್ಲಾಧಿಕಾರಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಹಾಗೂ ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ ನಿಯಮಿತದ ವಲಯ ಅಧಿಕಾರಿಗೆ ಪ್ರತ್ಯೇಕ ಮನವಿ ಪತ್ರ ಸಲ್ಲಿಸಿದರು.

ಬಂಜಾರ ಸಮಾಜದ ಸಭೆ, ಸಮಾರಂಭ, ಸಾಂಸ್ಕೃತಿಕ ಚಟುವಟಿಕೆಗಾಗಿ ಭವನ ನಿರ್ಮಿಸಲಾಗಿದೆ. ಇದೀಗ ಭವನಕ್ಕೆ ಮಹಾನಗರ ಪಾಲಿಕೆ ಕಚೇರಿಯನ್ನು ಸ್ಥಳಾಂತರಿಸುವುದು ಸರಿ ಯಲ್ಲ ಎಂದು ಸುಧಾಕರ ರಾಠೋಡ್ ಅಸಮಾಧಾನ ವ್ಯಕ್ತಪಡಿ ಸಿದರು.

ಭವನಕ್ಕೆ ಮಹಾನಗರ ಪಾಲಿಕೆ ಕಚೇರಿ ಸ್ಥಳಾಂತರಿಸುವುದರಿಂದ ಸಮಾಜದ ಚಟುವಟಿಕೆಗಳಿಗೆ ಅನಾನುಕೂಲವಾಗಲಿದೆ ಎಂದು ಹೇಳಿದರು.ಮಹಾನಗರ ಪಾಲಿಕೆ ಕಚೇರಿಯನ್ನು ಭವನಕ್ಕೆ ಸ್ಥಳಾಂತರಿಸದೆ, ಬೇರೆ ಸರ್ಕಾರಿ ಕಚೇರಿಗೆ ಸ್ಥಳಾಂತರ ಮಾಡಬೇಕು ಎಂದು ಒತ್ತಾಯಿಸಿದರು.

ಸಂಘದ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ ಜಿತೇಂದ್ರ ರಾಠೋಡ್, ಉಪಾಧ್ಯಕ್ಷ ಪ್ರಮೋದ್ ನಾಯಕ್, ಮುಖಂಡರಾದ ಸಿಕೇಂದ್ರ ರಾಠೋಡ್, ಕರಣ್ ಪವಾರ್, ನಿಲೇಶ್ ರಾಠೋಡ್, ಕುಪೇಂದ್ರ, ಗುರು ರಾಠೋಡ್, ರಾಜಕುಮಾರ ಜಾಧವ್, ಪರಶುರಾಮ ಚವಾಣ್, ರಾಜಕುಮಾರ ರಾಠೋಡ್, ರಾಜೇಂದ್ರ, ಮಿಥುನ್, ರಾಹುಲ್, ಪ್ರವೀಣ್ ಚವಾಣ್ ಮತ್ತಿತರರು ಇದ್ದರು.

# ಬೆಳೆ ಸಮೀಕ್ಷೆದಾರರ ಸೇವೆ ಖಾಯಂಗೆ ಒತ್ತಾಯ




**ಕಲಬುರಗಿ,ನ.17–**ರಾಜ್ಯದ ಪಿ.ಆರ್.(ಖಾಸಗಿ ನಿವಾಸಿಗಳು) ಬೆಳೆ ಸಮೀಕ್ಷೆದಾರರ ಸೇವೆ ಖಾಯಂಗೊಳಸಿಸಬೇಕು, ಜೀವ ವಿಮೆ ಮತ್ತು ಸೇವಾ ಭದ್ರತೆ ಒದಗಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ಬೆಳೆ ಸಮೀಕ್ಷೆದಾರರ ಸಂಘದ ಜಿಲ್ಲಾ ಘಟಕದ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಇಂದು ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆ ನಂತರ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು.

ರಾಜ್ಯದಲ್ಲಿ 25 ರಿಂದ 30 ಸಾವಿರ ಜನ ಬೆಳೆ ಸಮೀಕ್ಷೆದಾರರಿದ್ದು, ಕಳೆದ 9–10 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ. ಹೊಲದಲ್ಲಿ ಬೆಳೆ ಸಮೀಕ್ಷೆ ಮಾಡುವಾಗ ಹಾವು, ಚೇಳು, ಕಾಡುಹಂದಿ, ಹೆಜ್ಜೇನು ಕಚ್ಚಿ ಬೆಳೆ ಸಮೀಕ್ಷೆದಾರರು ಗಾಯಗೊಂಡಿದ್ದಾರೆ. ಸೇಡಂ ತಾಲ್ಲೂಕಿನ ಮಳಖೇಡ ಹಾಗೂ ಕೋಡ್ಲಾ ಗ್ರಾಮದಲ್ಲಿ ಇಬ್ಬರು ಪಿಆರ್‌ಗಳಿಗೆ ಹಾವು ಕಚ್ಚಿದ್ದು, ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡಿದರೂ ಪರಿಹಾರ ನೀಡಿಲ್ಲ. ಸರ್ಕಾರ ಬೆಳೆ ಸಮೀಕ್ಷೆದಾರರಿಗೆ ದಿನಗೂಲಿ ಆಧಾರದ ಮೇಲೆ ದಿನಾಲು ಕೆಲಸ ನೀಡಬೇಕು, ಜೀವ ವಿಮೆ ಒದಗಿಸಬೇಕು ಎಂದು ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಸಲ್ಲಿಸಿರುವ ಮನವಿ ಪತ್ರದಲ್ಲಿ ಒತ್ತಾಯಿಸಲಾಗಿದೆ.

ಸಂಘದ ಜಿಲ್ಲಾ ಅಧ್ಯಕ್ಷ ಸಂಗಮನಾಥ ಪಾಟೀಲ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಣಮಂತ್ರಾಯ ಎನ್.ಗುತ್ತೇದಾರ ಸೇರಿದಂತೆ ಮತ್ತಿತರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಶರಣಬಸವ ವಿಶ್ವವಿದ್ಯಾಲಯದಲ್ಲಿ “ನಾದ ನಮನ” ಸಂಗೀತ

**ಕಲಬುರಗಿ,ನ.17–** ಶರಣಬಸವೇಶ್ವರ ಸಂಸ್ಥಾನದ 8ನೇ ಮಹಾ ದಾಸೋಹ ಪೀಠಾಧಿಪತಿ ಲಿಂಗೈಕ್ಯ ಪೂಜ್ಯ ಡಾ. ಶರಣ ಬಸವಪ್ಪ ಅಪ್ಪಾಜಿಯವರ ಜನ್ಮದಿನೋತ್ಸವದಂಗವಾಗಿ ವಿವಿಯ ಸಂಗೀತ ವಿಭಾಗದಲ್ಲಿ “ನಾದ ನಮನ” ವಿಶೇಷ ಸಂಗೀತ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.ಈ ಕಾರ್ಯಕ್ರಮದಲ್ಲಿ ವಿವಿಯ ಕುಲಸಚಿವ ಡಾ. ಎಸ್. ಜಿ. ಡೊಳ್ಳೆಗೌಡರ್, ನಿರ್ದೇಶಕ ಡಾ. ವಿ.ಡಿ.ಮೈತ್ರಿ, ಪತ್ರಿಕೋದ್ಯಮ ವಿಭಾಗದ ಟಿ. ವಿ. ಶಿವಾನಂದನ್, ಸಂಗೀತ ವಿಭಾದ ರೇವಯ್ಯ ವಸ್ತ್ರದಮಠ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



ಯುವ ಮಾರ್ಗ

ಮಂಗಳವಾರ: 18–11–2025

## ಜಿಲ್ಲಾ ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗದ ಪ್ರಧಾನ ಕಾರ್ಯದರ್ಶಿಯಾಗಿ ರಾಜಪ್ಪ ಸಿಂಗ್ರಿ ನೇಮಕ



**ಯುವ ಮಾರ್ಗ ಸುದ್ದಿ**

**ದೇವದುರ್ಗ,ನ.17–** ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಡಿ.ಕೆ. ಶಿವಕುಮಾರರವರ ಅನುಮೋದನೆ ಮೇರೆಗೆ ಹಾಗೂ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಪರಿಶಿಷ್ಟ ಜಾತಿ ವಿಭಾಗದ ಅಧ್ಯಕ್ಷರಾದ ಆರ್.ಧರ್ಮಸೇನಾ ಅವರ ಆದೇಶ ಮೇರೆಗೆ ರಾಮಣ್ಣ ಇರಬಗೇರಾ ಅವರ ಶಿಫಾರಸ್ಸಿನ ಮೇರೆಗೆ ರಾಯಚೂರು ಜಿಲ್ಲಾ ಕಾಂಗ್ರೆಸ್ ಸಮಿತಿಯ ಪರಿಶಿಷ್ಟ ಜಾತಿ ವಿಭಾಗದ ಪ್ರದಾನ ಕಾರ್ಯದರ್ಶಿಯಾಗಿ ರಾಜಪ್ಪ ಸಿಂಗ್ರಿ ಗಬ್ಬೂರು ಇವರನ್ನ ನೇಮಕ ಮಾಡಿ ಸಣ್ಣ ನೀರಾವರಿ ಸಚಿವರಾದ ಎನ್.ಎಸ್ ಭೋಸರಾಜ ಅವರು ರಾಮಣ್ಣ ಇರಬಗೇರಾ ಹಾಗೂ ರಾಜಶೇಖರ ನಾಯಕ ಅವರು ಆದೇಶ ಪತ್ರವನ್ನು ನೀಡಿದರು.

ಇಂದಿನಿಂದ ಪಕ್ಷದ ಸಂಘಟನೆಯಲ್ಲಿ ಹಾಗೂ ಪಕ್ಷದ ಕಾರ್ಯಕ್ರಮದಲ್ಲಿ ತಾವು ಸಕ್ರಿಯವಾಗಿ ತೊಡಗಿಸಿಕೊಂಡು ತಮ್ಮ ವ್ಯಾಪ್ತಿಯಲ್ಲಿ ಬರುವ ಬೂತ್ ಮಟ್ಟದ ಮತ್ತು ಸ್ಥಳೀಯ ಕಾರ್ಯಕರ್ತರನ್ನು ವಿಶ್ವಾಸಕ್ಕೆ ತೆಗೆದುಕೊಂಡು ನೂತನ ಜವಾಬ್ದಾರಿಯಂತೆ ತಕ್ಷಣವೇ ಕಾರ್ಯ ಪ್ರವೃತ್ತರಾಗಾಗಿ ಪಕ್ಷವನ್ನು ಪರಿಶಿಷ್ಟ ಜಾತಿ ವಿಭಾಗದ ಪಕ್ಷದ ಸಂಘಟನೆ ಮತ್ತು ಬಲವರ್ಧನೆಗೆ ತಾವು ಕಾರ್ಯೋನ್ಮುಖರಾಗಬೇಕೆಂದು ಸೂಚಿಸಲಾಗಿದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಡವರ ಕಷ್ಟಕ್ಕೆ ಸ್ಪಂದಿಸಿದ ಶಾಸಕರಾದ ಬಿ.ನಾಗೇಂದ್ರ



**ಬಳ್ಳಾರಿ, ನ.17–** ಇತ್ತೀಚಿಗೆ ಹಾಸನ ತಾಲೂಕಿನ ಮೊಸಳೆ ಹೊಸಳ್ಳಿ ಸರ್ಕಾರಿ ಕಾಲೇಜ್ ವಿದ್ಯಾರ್ಥಿಗಳು ಗಣೇಶ ವಿಸರ್ಜನೆ ನೋಡುವ ಸಂದರ್ಭದಲ್ಲಿ ನಡೆದ ಭೀಕರವಾದ ದುರ್ಘಟನೆಯಲ್ಲಿ ಬಳ್ಳಾರಿಯ ಅಂತಿಮ ವರ್ಷದ ಇಂಜಿನಿಯರಿಂಗ್ ಪದವಿ ವ್ಯಾಸಂಗ ಮಾಡುತ್ತಿದ್ದ ವಿದ್ಯಾರ್ಥಿಯಾದ ಕೆ.

ಪ್ರವೀಣ್ ಕುಮಾರ್ ಮೃತ ಹೊಂದಿರುವ ವಿಷಯವನ್ನು ತಿಳಿದು ಬಳ್ಳಾರಿ ಗ್ರಾಮಾಂತರ ಶಾಸಕರಾದ ಬಿ. ನಾಗೇಂದ್ರರವರ ಸೂಚನೆಯ ಮೇರೆಗೆ ಅವರ ಆಪ್ತರು ನೊಂದವರ ಕುಟುಂಬಕ್ಕೆ ತೆರಳಿ ಸಾಂತ್ವಾನವನ್ನು ತಿಳಿಸಿ,ಸರ್ಕಾರವು ಮತ್ತು ಶಾಸಕರು ತಮ್ಮ ಕಷ್ಟಕ್ಕೆ ಇರುವುದಾಗಿ ಧೈರ್ಯವನ್ನು ತುಂಬಿದ್ದರು, ಅದರಂತೆ ಸರ್ಕಾರದಿಂದ ಶಾಸಕರು ತ್ವರಿತವಾಗಿ ಪರಿಹಾರವನ್ನು ಈಗಾಗಲೇ ನೊಂದ ಕುಟುಂಬಕ್ಕೆ ಒದಗಿಸಿ ಕೊಟ್ಟಿದ್ದಾರೆ.

ಇಂದು ಮಾಜಿ ಸಚಿವರಾದ ಹಾಗೂ ಬಳ್ಳಾರಿ ಗ್ರಾಮಾಂತರ ವಿಧಾನಸಭಾ ಶಾಸಕರಾದ ಮಾನ್ಯ ಬಿ. ನಾಗೇಂದ್ರರವರ ಸೂಚನೆಯ ಮೇರೆಗೆ ಮಹಾನಗರ ಪಾಲಿಕೆ ಸದಸ್ಯರು ಮತ್ತು ಕಾಂಗ್ರೆಸ್ ಮುಖಂಡರುಗಳು ನೊಂದ ಬಡ ಕುಟುಂಬದವರ ಮನೆಗೆ ತೆರಳಿ ಕಷ್ಟ ಸುಖಗಳ ವಿಚಾರಿಸಿ ಮೃತಪಟ್ಟ ವಿದ್ಯಾರ್ಥಿಯ ತಾಯಿಯಾದ ಕೆ. ಸುಶೀಲಮ್ಮನವರಿಗೆ ಬಳ್ಳಾರಿ ಗ್ರಾಮಾಂತರ ಶಾಸಕರಾದ ಬಿ. ನಾಗೇಂದ್ರ ರವರು ನೀಡಿರುವ ಒಂದು ಲಕ್ಷ ರೂಪಾಯಿ ಹಣವನ್ನು ಅವರು ಕುಟುಂಬಕ್ಕೆ ಆರ್ಥಿಕ ಸಹಾಯವನ್ನು ಮಾಡಿದರು.

ಈ ಸಂದರ್ಭದಲ್ಲಿ ಮಹಾ ನಗರ ಪಾಲಿಕೆ ಸದಸ್ಯರುಗಳಾದ ನಾಗಲಕರೆ ಗೋವಿಂದು, ಪಿ.ಜಗನ್ನಾಥ್, ಪಾಲಿಕೆ ಸದಸ್ಯರಾದ ರೇಡಿಯೋ ಪಾರ್ಕ್ ಬಿ.ಸೋಮು ಮಾಜಿ ಉಪ ಮಹಾಪೌರರಾದ ಬೇಣಕಲ್ ಬಸವರಾಜ ಗೌಡ, ಮಾಜಿ ಮಹಾ ನಗರ ಪಾಲಿಕೆ ಸದಸ್ಯರ ಅಕ್ಬರ್, ಜಿಲ್ಲಾ ಕುರುಬ ಸಂಘದ ಪ್ರಧಾನ ಕಾರ್ಯದರ್ಶಿಯಾದ ಕೆ. ಮೋಹನ್, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಸಂಗನಕಲ್ ವಿಜಯಕುಮಾರ್, ಗ್ರಾಮ ಪಂಚಾಯತಿ ಸದಸ್ಯರಾದ ಜೋಗಿನ ವಿಜಯಕುಮಾರ್ ಕಾಂಗ್ರೆಸ್ ಮುಖಂಡರಾದ ಎ.ಕೆ. ಗಂಗಾಧರ ಜೋಗಿನ ಚಂದ್ರಪ್ಪ ಸಾಮಾಜಿಕ ಜಾಲತಾಣದ ಕನಕ ಪ್ರಕಾಶ್, ಹಾಗೂ ನೊಂದ ಕುಟುಂಬದ ಸಂಬಂಧಿಕರು ಉಪಸ್ಥಿತರಿದ್ದರು.

# ಅಂತ್ಯ ಸಂಸ್ಕಾರಕ್ಕೆ ಅಡ್ಡಿ–ಸ್ಥಳಕ್ಕೆ ತಹಸೀಲ್ದಾರ್ ಭೇಟಿ



**ಯುವ ಮಾರ್ಗ ಸುದ್ದಿ**

**ಕವಿತಾಳ,ನ.17–**ಅಂತ್ಯ ಸಂಸ್ಕಾರಕ್ಕೆ ಗ್ರಾಮಸ್ಥರು ಅಡ್ಡಿ ಪಡಿಸಿದ ಪ್ರಯುಕ್ತ ಸಮೀಪದ ಉಟಗನೂರು ಮತ್ತು ಧೋತರಬಂಡಿ ಗ್ರಾಮಸ್ಥರ ನಡುವೆ ಪರಸ್ಪರ ವಾಗ್ವಾದ ಉಂಟಾಗಿದ್ದು ಸ್ಥಳಕ್ಕೆ ಮಾನ್ವಿ ತಹಸೀಲ್ದಾರ್ ಭೀಮರಾಯ ರಾಮಸಮುದ್ರ ಅವರು ಭೇಟಿ ನೀಡಿ ಉಬಯ ಗ್ರಾಮಗಳ ಗ್ರಾಮಸ್ಥರೊಂದಿಗೆ ಚರ್ಚಿಸಿ ಪರಿಸ್ಥಿತಿ ತಿಳಿಗೊಳಿಸಿದ ಘಟನೆ ನಿನ್ನೆ ನೆಡೆದಿದೆ.

ಭಾನುವಾರ ಮೃತರಾದ ಧೋತರಬಂಡಿ ಗ್ರಾಮದ ರಾಮಾಂಜನೆಯ ಅವರ ಅಂತ್ಯ ಸಂಸ್ಕಾರವನ್ನು ಉಟಗನೂರು ಸರ್ಕಾರಿ ಪ್ರೌಢ ಶಾಲೆಯ ಹತ್ತಿರ ಸ್ಮಶಾನ ಜಾಗದಲ್ಲಿ ಮಾಡಲು ಗ್ರಾಮಸ್ಥರು ತಯಾರಿ ನಡೆಸಿದ್ದರು ಅದಕ್ಕೆ ವಿರೋಧ ವ್ಯಕ್ತಪಡಿಸಿದ ಉಟಗನೂರು ಗ್ರಾಮಸ್ಥರು ಶಾಲೆಯ ಪಕ್ಕದಲ್ಲಿ ಅಂತ್ಯ ಸಂಸ್ಕಾರ ನಡೆಸದಂತೆ ಅಡ್ಡಿ ಪಡಿಸಿದ್ದಾರೆ, ಹಿಗಾಗಿ ಎರಡೂ ಗ್ರಾಮಗಳ ಗ್ರಾಮಸ್ಥರ ನಡುವೆ ಪರಸ್ಪರ ವಾಗ್ವಾದ ಉಂಟಾಗಿ ಪರಿಸ್ಥಿತಿ ವಿಕೋಪಕ್ಕೆ ತೆರಳುವಷ್ಟರಲ್ಲಿ ಕವಿತಾಳ ಠಾಣೆಯ ಪಿಎಸ್ಐ ಗುರುಚಂದ್ರ ಯಾದವ್ ಮತ್ತು ಮಾನ್ವಿ ತಹಸೀಲ್ದಾರ್ ಭೀಮರಾಯ ರಾಮಸಸಮುದ್ರ ಅವರು ಗ್ರಾಮಸ್ಥರೊಂದಿಗೆ ಚರ್ಚಿಸಿ ಅಂತ್ಯ ಸಂಸ್ಕಾರ ಮಾಡಲು ಅನುವು ಮಾಡಿಕೊಟ್ಟರು.

'ಶಾಲೆ ಪಕ್ಕದಲ್ಲಿ ಸರ್ವೇ ನಂಬರ್ ಜಮೀನಿನಲ್ಲಿ ಸ್ಮಶಾನಕ್ಕೆ ಎರಡು ಎಕರೆ ಜಮೀನು ನೀಡಲಾಗಿದ್ದು, ಆದರೆ ಈ ಸರ್ವೇ ನಂಬರ್‌ನಲ್ಲಿ ಸ್ಮಶಾನಕ್ಕೆ ಸೂಕ್ತ ಸ್ಥಳ ಗುರುತು ಮಾಡಿಲ್ಲ, ಹಿಗಾಗಿ ಗೊಂದಲ ಉಂಟಾಗಿತ್ತು, ಶಾಲೆಯ ಜಾಗದ ಕುರಿತು ಸರ್ವೆ ನಡೆಸಿ ಹದ್ದಿಬಸ್ತು ಮಾಡುವುದು ಮತ್ತು ನಕ್ಷೆ ಪ್ರಕಾರ ಸ್ಮಶಾನಕ್ಕೆ ಸೂಕ್ತ ಸ್ಥಳ ಗುರುತಿಸಲಾಗುವುದು' ಎಂದು ತಹಸೀಲ್ದಾರರು ತಿಳಿಸಿದರು.

ಸ್ಥಳದಲ್ಲಿ ಎಎಸ್ಐಗಳಾದ ಜಾಫರ್‌ಸಾಬ್, ಹೇಮಂತ್, ಸಿಬ್ಬಂದಿ ಮಲ್ಲಿಕಾರ್ಜುನ ನೀರಮಾನ್ವಿ ಮತ್ತು ಕಂದಾಯ ನಿರೀಕ್ಷಕ ಸತೀಶ ಸೇರಿದಂತೆ ಇನ್ನಿತರ ಸಿಬ್ಬಂದಿಗಳು ಇದ್ದರು.

### ಸಂವಿಧಾನ ಸಂರಕ್ಷಣಾ ಪಡೆಯ ಜಾಥಾ

# ಸ್ವಯಂ ಪ್ರೇರಿತರಾಗಿ ಎಲ್ಲರೂ ಭಾಗವಹಿಸಿ ಯಶಸ್ವಿಗೊಳಿಸೋಣ: ಹನುಮಂತಪ್ಪ ಮನ್ನಾಪರ್

**ಯುವ ಮಾರ್ಗ ಸುದ್ದಿ**



**ದೇವದುರ್ಗ,ನ.17–** ರಾಯಚೂರು ಜಿಲ್ಲೆಯಲ್ಲಿ ಇಂದು ನಡೆಯುವ ಸಂವಿಧಾನ ಸಂರಕ್ಷಣಾ ಪಡೆಯ ಜಾಥಾ ಕಾರ್ಯಕ್ರಮದಲ್ಲಿ ದಲಿತ, ಪ್ರಗತಿಪರರು ಎಲ್ಲರೂ ಭಾಗವಹಿಸಿ ಯಶಸ್ವಿಗೊಳಿಸೋಣವೆಂದು ಎಮ್ ಆರ್ ಎಚ್ ಎಸ್ ಜಿಲ್ಲಾಧ್ಯಕ್ಷರು ಹನುಮಂತಪ್ಪ ಮನ್ನಾಪರ್ ತಾಲೂಕಿನ ಪ್ರವಾಸಿ ಮಂದಿರದಲ್ಲಿ ಪತ್ರಿಕಾಗೋಷ್ಠಿಯ ಮೂಲಕ ತಿಳಿಸಿದರು.

ದೇಶದಲ್ಲಿ ನೊಂದಣಿ ಮಾಡಿಕೊಳ್ಳದ ಸಂಘವೊಂದು 100 ವರ್ಷಗಳ ಸಂಭ್ರಮದ ಹೆಸರಿನಲ್ಲಿ ಮಕ್ಕಳ ಕೈಯಲ್ಲಿ ಲಾಟಿ ನೀಡಿ ಮಕ್ಕಳನ್ನು ದಾರಿ ತಪ್ಪಿಸುವ ಕೆಲಸ ಮತ್ತು ದೇಶ ವಿರೋಧಿ ಚಟುವಟಿಗಳ ಕಡೆಗೆ ತಳ್ಳಲಾಗುತ್ತಿದೆ. ಈಗಾಗಲೇ ಹಲವು ಭಾಗಗಳಲ್ಲಿ ಸಂವಿಧಾನ ಪತ ಜಾಥಾ ಹಮ್ಮಿಕೊಂಡಿದ್ದು ಅದರಂತೆ ದಿನಾಂಕ: 18–11–2025 ರಂದು ರಾಯಚೂರು ಜಿಲ್ಲೆಯಲ್ಲಿ ಸಂವಿಧಾನ ಸಂರಕ್ಷಣಾ ಪಡೆಯ ಜಾಥಾ ಹಮ್ಮಿಕೊಂಡಿದ್ದು ನಮ್ಮ ದೇವದುರ್ಗ ತಾಲೂಕಿನ ಪ್ರಗತಿಪರರು, ದಲಿತರ ಪರರು, ರೈತ ಪರ, ಕನ್ನಡ ಪರರು, ಬಾಬಾ ಸಾಹೇಬರ ಅನುಯಾಯಿಗಳು ಈ ಜಾಥಾದಲ್ಲಿ ಸ್ವಯಂ ಪ್ರೇರಿತವಾಗಿ ಭಾಗವಹಿಸಿ ಯಶಸ್ವಿಕೊಳಿಸಬೇಕೆಂದು ಕೋರಿದರು.

ಈ ಸಂದರ್ಭದಲ್ಲಿ ಭೀಮ್ ಆರ್ಮಿ ತಾಲೂಕು ಅಧ್ಯಕ್ಷ ವಿಶ್ವಾನಾಥ್ ಬಲ್ಲಿದವ್,ಚಂದ್ರು ನಾಯಕ ಗೌರಂಪೇಟಿ, ರಂಗಪ್ಪ ಹೊನ್ನಕುಣಿ, ಭೀಮಾಶಂಕರ ಯರಮಸಾಳ, ಲಕ್ಷ್ಮಣ ಮಸರಕಲ್ ಉಪಸ್ಥಿತರಿದ್ದರು.

### ವಿಕಲಚೇತನರ ರಾಜ್ಯ ಮುಖಂಡರ ನೇತೃತ್ವದಲ್ಲಿ ಸಭೆ

# ಸಂಕಲ್ಪ ವಿಕಲಚೇತನರ ಒಕ್ಕೂಟ–ಜಿಲ್ಲಾ ಘಟಕ ರಚನೆ

**ಯುವ ಮಾರ್ಗ ಸುದ್ದಿ**



**ಮಾನ್ವಿ,ನ.17** ಪಟ್ಟಣದಲ್ಲಿ ವಿಕಲಚೇತನರ ರಾಜ್ಯ ಮುಖಂಡರಾದ ದೇಸಾಯಿ ದೊತರಬಂಡಿ ರವರ ನೇತೃತ್ವದಲ್ಲಿ ವಿಕಲಚೇತನರ ಭಾನುವಾರ ಸಭೆ ನಡೆಯಿತು. ಜಿಲ್ಲಾಮಟ್ಟದಲ್ಲಿ ಸಂಘಟನೆಯನ್ನು ಬಲಪಡಿಸುವ ಉದ್ದೇಶದಿಂದ ಕರೆಯಲಾಗಿದ್ದ ಈ ಸಭೆಯಲ್ಲಿ ಹೊಸ ಜಿಲ್ಲಾ ಹಾಗೂ ತಾಲೂಕು ಹುದ್ದೆಗಳನ್ನು ಘೋಷಿಸಲಾಯಿತು.

ಸಭೆಯಲ್ಲಿ ಸಂಕಲ್ಪ ವಿಕಲಚೇತನರ ಒಕ್ಕೂಟದ ಜಿಲ್ಲಾಧ್ಯಕ್ಷರಾಗಿ ಶಿವಕುಮಾರ್ ಚಲ್ಮಲ್,ಜಿಲ್ಲಾ ಉಪಾಧ್ಯಕ್ಷರಾಗಿ ಸಾವಿತ್ರಮ್ಮ,ಹಾಗೂ ಮಾನ್ವಿ ತಾಲೂಕು ಅಧ್ಯಕ್ಷರಾಗಿ ಲಕ್ಷ್ಮೀ ಉಟಕನೂರು ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.ಅದರ ಜೊತೆಗೆ, ಸಂಘಟನೆಯ ಬೆಳವಣಿಗೆ, ಮಾರ್ಗದರ್ಶನ ಹಾಗೂ ಉತ್ತಮ ದಿಕ್ಕನ್ನು ನೀಡುವ ಜವಾಬ್ದಾರಿಯನ್ನು ಹೊತ್ತುಕೊಳ್ಳುವಂತೆ ದೇಸಾಯಿ ದೊತರಬಂಡಿ ರವರನ್ನು 'ಸಂಕಲ್ಪ ವಿಕಲಚೇತನರ ಒಕ್ಕೂಟದ ಗೌರವಾಧ್ಯಕ್ಷರಾಗಿ' ಅಧಿಕೃತವಾಗಿ ಆಯ್ಕೆ ಮಾಡಲಾಯಿತು.

ಈ ಘೋಷಣೆಯನ್ನು ಸಭೆಯಲ್ಲಿದ್ದ ಎಲ್ಲಾ ಸದಸ್ಯರು ಚಪ್ಪಾಳೆಗಟ್ಟುವ ಮೂಲಕ ಸ್ವಾಗತಿಸಿದರು.ಹುದ್ದೆಗಳ ಘೋಷಣೆಯ ನಂತರ ಮಾತನಾಡಿದ ದೇಸಾಯಿ ದೊತರಬಂಡಿ ಅವರು ವಿಕಲಚೇತನರ ಹಕ್ಕು–ಸೌಲಭ್ಯಗಳು, ಸರ್ಕಾರದ ವಿವಿಧ ಯೋಜನೆಗಳು, ಮತ್ತು ಸಂಘಟನೆಯ ಬಲವರ್ಧನೆ ಕುರಿತಂತೆ ಮನದಾಳದ ಮಾತುಗಳನ್ನು ಹಂಚಿಕೊಂಡರು.

ವಿಕಲಚೇತನರ ಒಗ್ಗಟ್ಟು ಮತ್ತು ಸಂಘಟನೆ ಬಲವಾಗಿದ್ದಾಗ ಮಾತ್ರ ಸರ್ಕಾರದ ಮುಂದೆ ನಮ್ಮ ಧ್ವನಿ ಪರಿಣಾಮಕಾರಿಯಾಗಿ ತಲುಪುತ್ತದೆ ಎಂದು ಅವರು ಒತ್ತಿ ಹೇಳಿದರು.ಸಂಘಟನೆಯ ನಿಷ್ಠೆ, ಪಾರದರ್ಶಕತೆ ಮತ್ತು ಸೇವಾಭಾವನೆಯೇ ನಿಜವಾದ ಬದಲಾವಣೆಗೆ ದಾರಿ ಮಾಡುತ್ತದೆ ಎಂದು ಅವರು ಹೇರಳವಾಗಿ ಅಭಿಪ್ರಾಯಪಟ್ಟರು.ಇಂದಿನ ಸಭೆಯಲ್ಲಿ ವಿವಿಧ ಗ್ರಾಮಗಳಿಂದ ಬಂದಿದ್ದ ವಿಕಲಚೇತನರ ಮುಖಂಡರು, ಸದಸ್ಯರು, ಸಮಾಜ ಸೇವಕರು ಹಾಜರಿದ್ದರು.

ಸಭೆಯು ಉತ್ಸಾಹಭರಿತ ಚರ್ಚೆಗಳೊಂದಿಗೆ, ಪರಸ್ಪರ ಅಭಿಪ್ರಾಯ ಹಂಚಿಕೆಯಿಂದ ಹಾಗೂ ಸಂಘಟನೆಯ ಮುಂದಿನ ದಿಕ್ಕು ನಿಲುವುಗಳನ್ನು ತೀರ್ಮಾನಿಸುವ ಮೂಲಕ ಯಶಸ್ವಿಯಾಗಿ ಮುಕ್ತಾಯವಾಯಿತು.

## ಪ್ರತ್ಯೇಕ ರಾಜ್ಯ ಕೇಳಲು ಇಂತಹ ಪರಿಸ್ಥಿತಿ ಕಾರಣವಾಗುತ್ತವೆ : ಬೆಟ್ಟದೂರು

**ಕೊಪ್ಪಳ, ನ.17–** ಸರಕಾರ ಉತ್ತರ ಕರ್ನಾಟಕ ಅಭಿವೃದ್ಧಿ ಹೊಂದದ ಕಾರಣ, ಪರಿಸರ ವಿರೋಧಿ ಹಾಗೂ ಜನರ ಹೋರಾಟವನ್ನು ಗಮನಿಸದೆ ಇರುವದು ನೋವು ತಂದಿದೆ ಎಂದು ಕಾರ್ಖಾನೆ ವಿರೋಧಿ ಹೋರಾಟದ ಪ್ರಮುಖರಾದ ಅಲ್ಲಮಪ್ರಭು ಬೆಟ್ಟದೂರು ಅಭಿಪ್ರಾಯ ಪಟ್ಟಿದ್ದಾರೆ.

ಅವರು ನಗರಸಭೆ ಮುಂದೆ ನಡೆದಿರುವ ಬಲ್ಡೋಟಾ, ಕಿರ್ಲೋಸ್ಕರ್, ಕಲ್ಯಾಣಿ, ಮುಕುಂದ ಸುಮಿ, ಎಕ್ಸ್ ಇಂಡಿಯಾ ಸೇರಿ ಇತರೆ ಕಾರ್ಖಾನೆಗಳ ವಿಸ್ತೀರ್ಣ, ಸ್ಥಾಪನೆ ವಿರೋಧಿಸಿ ನಡೆದಿರುವ ಹೋರಾಟದ 18 ನೇ ದಿನ ಅವರು ಮಾತನಾಡಿದರು.

ಬಾಧಿತ ಪ್ರದೇಶಕ್ಕೆ ಭೇಟಿ ನೀಡದ, ಪ್ರತಿಭಟನೆ ಗಮನಿಸದ,




ಜನರ ಕೂಗು ಕೇಳದ ಸರಕಾರಗಳ ಇಂತಹ ಧೋರಣೆಗಳೇ ಪ್ರತ್ಯೇಕ ಕೂಗಿಗೆ ಪುಷ್ಟಿ ನೀಡುತ್ತವೆ ಎಂದು ಗುಡುಗಿದರು.

# ಬಿಸಿಎಂ ಇಲಾಖೆಯಿಂದ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣ

**ರಾಯಚೂರು,ನ.17–** ಪಿ.ಯು.ಸಿ ಹೊರತುಪಡಿಸಿ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು, ಹಾಗೂ ಪವರ್ಗ–1ರ ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ, 2025–26ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ಮೆಟ್ರಿಕ್–ನಂತರದ ವಿದ್ಯಾರ್ಥಿವೇತನ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿವೇತನ, ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಮತ್ತು ಶುಲ್ಕ ಮರುಪಾವತಿ ಕಾರ್ಯಕ್ರಮಗಳ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು 25–11–2025ರ ವರೆಗೆ ಪೋಷಕರು/ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ ಮನವಿಯ ಮೇರೆಗೆ ವಿಸ್ತರಿಸಲಾಗಿದೆ. ಅರ್ಹ ವಿದ್ಯಾರ್ಥಿಗಳು ಈ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕು.

ಆನ್‌ಲೈನ್ ಮೂಲಕ ಅರ್ಜಿಸಲ್ಲಿಸಬೇಕಾದ ವೆಬ್‌ಸೈಟ್ ವಿಳಾಸ https://ssp.postmatric.karnataka.gov.in/, , ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಭೇಟಿ ನೀಡಬೇಕಾದ ವೆಬ್ ಸೈಟ್ ವಿಳಾಸ https://bcwd.karnataka.gov.in. ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ: 8050770005. ಇಮೇಲ್: bcwdhelpline@gmail.com ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಸಹಾಯವಾಣಿ ಇಮೇಲ್: postmatrichelp@karnataka.gov.in ದೂರವಾಣಿ ಸಂಖ್ಯೆ: 1902 ಇರುತ್ತದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆದೋನಿಯಲ್ಲಿ ಈಶ್ವರ ದೇವರ ನೂತನ ರಥೋತ್ಸವ ಸಂಭ್ರಮ



**ಬಳ್ಳಾರಿ:ನ,17–** ಆಂದ್ರಪ್ರದೇಶ ಆದೋನಿ ನಗರದ ಬಾಳೆಕೊಳದ ಶ್ರೀಈಶ್ವರ ದೇವರ ಪ್ರಥಮ ನೂತನ ರಥೋತ್ಸವ ಶುಕ್ರವಾರ ವಿಜೃಂಭಣೆಯಿಂದ ಜರುಗಿತು.

ರಥೋತ್ಸವ ಅಂಗವಾಗಿ ಎದುರು ಬಸವಣ್ಣ ಮೂರ್ತಿ ಪ್ರತಿಷ್ಠಾಪನೆ, ಬಾಳೆಕೊಳೇಶ್ವರ ದೇವರಿಗೆ ವಿಶೇಷ ರುದ್ರಾಭಿಷೇಕ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಶ್ರದ್ಧಾಭಕ್ತಿಯಿಂದ ನಡೆದವು.

ಬಳಿಕ ನಡೆದ ಧಾರ್ಮಿಕ ಸಭೆಯ ಸಾನ್ನಿಧ್ಯ ವಹಿಸಿದ್ದ ಸಿಂಧನೂರು ತಾಲ್ಲೂಕು ವಳ ಬಳ್ಳಾರಿಯ ಸಿದ್ಧಲಿಂಗಸ್ವಾಮಿಗಳು ಮಾತನಾಡಿ, ಬಾಳೆಕೊಳದದಲ್ಲಿ ಶರಣರು, ಋಷಿಮುನಿಗಳು ತಪಸ್ಸು ಮಾಡಿದ ಜಾಗೃತ ಸ್ಥಳವಾಗಿದೆ. ಇಂಥ ಪವಿತ್ರ ನೆಲದಲ್ಲಿ ಲೋಕಕಲ್ಯಾಣರ್ಥ ನಾವು ಸ್ವತಃ ಅನುಷ್ಠಾನ ಮಾಡಿದ್ದೇವು ಎಂದು ಹೇಳಿದರು.

ಗಡಿನಾಡ ಸಾಹಿತಿ ನಾ.ಮ. ಮರುಳಾರಾಧ್ಯ ಮಾತನಾಡಿ, ಇಂದಿನ ಸಮಾಜಕ್ಕೆ ಅವಶ್ಯವಾಗಿ ಬೇಕಾಗಿರುವುದು ಮಾನಸಿಕ ನೆಮ್ಮದಿ, ಶಾಂತಿ. ಇವುಗಳನ್ನು ಬಯಸಿದ ಜನರೆಲ್ಲ ಧ್ಯಾನ ಯೋಗಗಳ ಕಡೆ ಮನಸ್ಸು ಮಾಡಬೇಕಾಗಿದೆ ಎಂದರು.

ವಳ ಬಳ್ಳಾರಿ ಬಸವಲಿಂಗ ಸ್ವಾಮೀಜಿ, ಆದೋನಿ ಮಂಡಗಿರಿ ಮಠದ ಗುರು ಸಿದ್ಧದೇವರು ಆಶೀರ್ವಚನ ನೀಡಿದರು.

ಮುಖಂಡರಾದ ಕೆ. ಸೂಗೂರಪ್ಪ, ಯಗ್ಗಟಿ ಪ್ರತಾಪ, ಸೋಮಶೇಖರಗೌಡ, ವೆಂಕಟರೆಡ್ಡಿ, ಚಂದ್ರಶೇಖರಯ್ಯ, ಗುರುಮೂರ್ತಿ, ಗುರುಲಿಂಗ, ಶರಣಪ್ಪ, ದೇವಿಶೆಟ್ಟಿ ಮಂಜು, ಗಾಣಿಗರ ಬಸವರಾಜಪ್ಪ, ಗುರುನಾಥಯ್ಯ, ಬಸವರಾಜಸ್ವಾಮಿ, ಚನ್ನಬಸಯ್ಯಸ್ವಾಮಿ ಹಾಜರಿದ್ದರು.

## ರಕ್ತದಾನ ಶಿಬಿರಕ್ಕೆ ಚಾಲನೆ

**ಕೆ.ಆರ್.ಪುರ, ನ.17–** ಒಬ್ಬರು ಮಾಡುವ ರಕ್ತದಾನದಿಂದ ನಾಲ್ಕು ಜನರ ಪ್ರಾಣಕ್ಕೆ ನೇರವಾಗಲಿದ್ದು, ಪ್ರತಿಯೊಬ್ಬರು ರಕ್ತದಾನ ಮಾಡುವಂತೆ ಕೇಂಬ್ರಿಡ್ಜ್ ಕಾಲೇಜಿನ ಅಧ್ಯಕ್ಷ ಡಿ.ಕೆ.ಮೋಹನ್ ಅವರು ತಿಳಿಸಿದರು.ಕೆ.ಆರ್.ಪುರದ ಕಾಲೇಜು ಆವರಣದಲ್ಲಿ ಏರ್ಪಡಿಸಿದ್ದ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.ಇತ್ತೀಚೆಗೆ ಅತಿಹೆಚ್ಚು ಆರೋಗ್ಯ ಸಮಸ್ಯೆಗಳು ಕಾಡುತ್ತಿರುವ ಸಂದರ್ಭದಲ್ಲಿ ರಕ್ತದ ಅವಶ್ಯಕತೆ ಹೆಚ್ಚಾಗಿದ್ದು,ಪ್ರತಿಯೊಬ್ಬರು ರಕ್ತದಾನ ಮಾಡುವಂತೆ ಮನವಿ ಮಾಡಿದರು.

ರಕ್ತದಾನದಿಂದ ಹಾನಿಯಾಗುತ್ತದೆ ಎಂಬುದು ತಪ್ಪು ತಿಳುವಳಿಕೆ, ರಕ್ತದಾನದಿಂದ ಯಾವುದೇ ಸಮಸ್ಯೆಯಾಗುವುದಿಲ್ಲ, ಪ್ರತಿಯೊಬ್ಬರು ರಕ್ತದಾನ ಮಾಡುವಂತೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಸಿಇಓ ನೀತಿನ್ ಮೋಹನ್, ಪ್ರಾಂಶುಪಾಲರಾದ ರವಿಶಂಕರ್, ಕ್ಲಬ್ ನಾ ಅಶ್ವಥ್ ನಾರಾಯಣಸ್ವಾಮಿ, ಲಯನ್ ಪ್ರತಾಪ್ ಯಾದವ್, ಪ್ರಮಿತ, ವಂದನಾಮತೂರಿಯಾ ಇದ್ದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H